ಸಂಪುಟ: 11 ಸಂಚಿಕೆ: 187 ಪುಟ: 4+2 ಬೆಲೆ : 3.00 ಶನಿವಾರ, ಆಗಸ್ಟ್ 29, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 187 Pages : 4+2 Rate : 3.00 Saturday , August 29, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

## ವಿಧಾನಸಭಾಧ್ಯಕ್ಷ ಹುದ್ದೆಯ ಗೌರವ ಕಾಪಾಡುತ್ತ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಭರವಸೆ ನೀಡಿದ ಜಿ.ಎಸ್.ಪಾಟೀಲ

# ಗದಗ ಜಿಲ್ಲೆಯ ಅಭಿವೃದ್ಧಿಯೇ ನನ್ನ ಆದ್ಯತೆ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಜಿಲ್ಲೆಯ ಜನತೆ ಹಾಗೂ ಮಠ-ಮಾನ್ಯಗಳ ಪೂಜ್ಯರ ಆಶೀರ್ವಾದದಿಂದ ತನಗೆ ಕರ್ನಾಟಕ ವಿಧಾನಸಭಾಧ್ಯಕ್ಷರ ಅತ್ಯುನ್ನತ ಹುದ್ದೆ ದೊರೆತಿದ್ದು, ಈ ಜವಾಬ್ದಾರಿಯನ್ನು ಗದಗ ಜಿಲ್ಲೆಯ ಜ್ವಲಂತ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಹಾಗೂ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಬಳಸಿಕೊಳ್ಳುವುದಾಗಿ ವಿಧಾನಸಭಾಧ್ಯಕ್ಷ ಜಿ.ಎಸ್. ಪಾಟೀಲ ಹೇಳಿದರು.

ಶಿರಹಟ್ಟಿಯ ಜಗದ್ಗುರು ಫಕೀರೇಶ್ವರ ಮಠಕ್ಕೆ ಆಗಮಿಸಿದ ಅವರು, ಕರ್ತೃ ಶ್ರೀ ಜಗದ್ಗುರು ಫಕೀರೇಶ್ವರರ ಗದ್ದುಗೆಯ ದರ್ಶನ ಪಡೆದು, ಉಭಯ ಶ್ರೀಗಳಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ವಿಧಾನಸಭಾಧ್ಯಕ್ಷರಾಗಿ ಆಯ್ಕೆಯಾದ ಕೂಡಲೇ ಮೊದಲ ಅಧಿವೇಶನವನ್ನು ಯಶಸ್ವಿಯಾಗಿ ನಿರ್ವಹಿಸಿದ್ದೇನೆ. ಈ ಸಂದರ್ಭದಲ್ಲಿ ವಿವಿಧ ಹೋರಾಟಗಳ ಮುಖಂಡರುಗಳ ಸಮಸ್ಯೆಗಳ ಪರಿಹಾರದ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹಾಗೂ ವಿರೋಧ ಪಕ್ಷಗಳ ಮುಖಂಡರೊಂದಿಗೆ ಚರ್ಚಿಸಿದ್ದೇನೆ ಎಂದು ಹೇಳಿದರು.

ಸದನದಲ್ಲಿ ಜನಪರ ಸಮಸ್ಯೆಗಳ ಕುರಿತು ವಿಸ್ತೃತ ಚರ್ಚೆ ನಡೆಯಬೇಕು. ಆಡಳಿತ ವ್ಯವಸ್ಥೆಯಲ್ಲಿ ಅಗತ್ಯ ಬದಲಾವಣೆ ತರಬೇಕು. ವಿಶೇಷವಾಗಿ ಗಣಕೀಕರಣ ಹಾಗೂ ಕಾಗದರಹಿತ ವ್ಯವಸ್ಥೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಬೆಳಗಾವಿಯ ಸುವರ್ಣಸೌಧದಲ್ಲಿ ಉಪಸಮಿತಿಗಳ ಸಭೆಗಳು ಪ್ರತಿತಿಂಗಳು ನಡೆಯುವಂತಾಗಬೇಕು ಎಂಬ ಉದ್ದೇಶವಿದೆ. ಅಲ್ಲದೆ, ಬೆಂಗಳೂರಿನ ಮಾದರಿಯಲ್ಲಿಯೇ ಬೆಳಗಾವಿಯಲ್ಲೂ ಶಾಸಕರ ಭವನ ನಿರ್ಮಿಸುವ ಕುರಿತು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿದ್ದು, ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಹೇಳಿದರು.

**ಮಂತ್ರಿ ಆಗಿದ್ದರೆ ಒಂದೇ ಇಲಾಖೆಗೆ ಸೀಮಿತವಾಗುತ್ತಿದ್ದೆ**

ಮಂತ್ರಿ ಆಗಿದ್ದರೆ ಕೇವಲ ಒಂದು ಇಲಾಖೆಯ ಜವಾಬ್ದಾರಿಗೆ ಸೀಮಿತವಾಗಬೇಕಾಗುತ್ತಿತ್ತು. ಆದರೆ, ಜನರ ಪ್ರೀತಿ ಮತ್ತು ಬೆಂಬಲದಿಂದ ಇಂದು ವಿಧಾನಸಭಾಧ್ಯಕ್ಷರಂತಹ ಅತ್ಯುನ್ನತ ಹುದ್ದೆ ದೊರೆತಿದೆ. ಈ ಸ್ಥಾನದಲ್ಲಿ ಎಲ್ಲ ಸಚಿವರು ಹಾಗೂ ಸರ್ಕಾರದ ಕಾರ್ಯದರ್ಶಿಗಳೊಂದಿಗೆ ಚರ್ಚಿಸಿ ಜನರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಅವಕಾಶವಿದೆ ಎಂದು ಜಿ.ಎಸ್. ಪಾಟೀಲ ಹೇಳಿದರು.



ಈ ಅಧಿಕಾರವನ್ನು ಜಿಲ್ಲೆಯ ಸರ್ವಾಂಗೀಣ ಪ್ರಗತಿಗೆ ಬಳಸಿಕೊಂಡು, ವಿಧಾನಸಭಾಧ್ಯಕ್ಷರ ಹುದ್ದೆಯ ಗೌರವವನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಅವರು ಭರವಸೆ ನೀಡಿದರು. ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಮಾತನಾಡಿ, ರಾಜ್ಯದಲ್ಲಿಯೇ ಅವಿಭಕ್ತ ಕುಟುಂಬದ ಮೌಲ್ಯಗಳನ್ನು ಕಾಣಬೇಕಾದರೆ ಜಿ.ಎಸ್. ಪಾಟೀಲ ಅವರ ಮನೆತನವನ್ನು ನೋಡಬೇಕು. ಅವರಿಗೆ ಇಂತಹ ಮಹತ್ವದ ಹುದ್ದೆ ಬಹಳ ಹಿಂದೆಯೇ ದೊರೆಯಬೇಕಿತ್ತು. ತಡವಾಗಿಯಾದರೂ ಅವರ ವ್ಯಕ್ತಿತ್ವಕ್ಕೆ ತಕ್ಕಂತಹ ಜವಾಬ್ದಾರಿ ದೊರೆತಿರುವುದು ಗದಗ ಜಿಲ್ಲೆಯ ಜನತೆಯ ಸೌಭಾಗ್ಯವಾಗಿದೆ ಎಂದರು.

ಜಗದ್ಗುರು ಫಕೀರೇಶ್ವರ ದಿಂಗಾಲೇಶ್ವರ ಸ್ವಾಮೀಜಿ ಮಾತನಾಡಿ, ಜಿ.ಎಸ್. ಪಾಟೀಲರ ಮನೆತನ ಭಕ್ತಿ ಮತ್ತು ದಾಸೋಹಕ್ಕೆ ಹೆಸರುವಾಸಿಯಾಗಿದೆ. ಹಾಲಿ ಶಾಸಕರಾಗಿದ್ದಾಗಲೂ, ಮಾಜಿ ಶಾಸಕರಾಗಿದ್ದಾಗಲೂ ಒಂದೇ ರೀತಿಯ ಸರಳ ವ್ಯಕ್ತಿತ್ವವನ್ನು ಉಳಿಸಿಕೊಂಡವರು ಅವರು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನಾಡಿನ ಪೂಜ್ಯರ ಆಶೀರ್ವಾದ ಜಿ.ಎಸ್. ಪಾಟೀಲರ ಮೇಲಿರಲಿದೆ. ಅವರು ವಿಧಾನಸಭಾಧ್ಯಕ್ಷರಾಗಿ ಸದನವನ್ನು ನಿರ್ವಿವಾದವಾಗಿ ಹಾಗೂ ಸಮರ್ಥವಾಗಿ ಮುನ್ನಡೆಸುತ್ತಾರೆ ಎಂಬ ವಿಶ್ವಾಸವಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಗದ್ಗುರು ಫಕೀರೇಶ್ವರ ಸಿದ್ದರಾಮ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು.

> **ಜನತೆಯ ಪ್ರೀತಿ, ವಿಶ್ವಾಸ ಮತ್ತು ಪೂಜ್ಯರ ಆಶೀರ್ವಾದದಿಂದ ವಿಧಾನಸಭಾಧ್ಯಕ್ಷರಂತಹ ಅತ್ಯುನ್ನತ ಜವಾಬ್ದಾರಿ ದೊರೆತಿದೆ. ಈ ಹುದ್ದೆಯನ್ನು ಕೇವಲ ಸ್ಥಾನಮಾನಕ್ಕಾಗಿ ಬಳಸದೆ, ಗದಗ ಜಿಲ್ಲೆಯ ಜ್ವಲಂತ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಹಾಗೂ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಬಳಸಿಕೊಳ್ಳುತ್ತೇನೆ.**
> **- ಜಿ.ಎಸ್. ಪಾಟೀಲ,** ವಿಧಾನಸಭಾಧ್ಯಕ್ಷರು

ಮಾಜಿ ಸಂಸದ ಐ.ಜಿ. ಸನದಿ, ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಡಿ.ಎನ್. ಡಬಾಲಿ, ಹುಮಾಯೂನ್ ಮಾಗಡಿ, ವಿಶ್ವನಾಥ ಕಪ್ಪತ್ತನವರ, ಶಿವಪ್ರಕಾಶ ಮಹಾಜನಶೆಟ್ಟರ, ಗುರನಾಥ ದಾನಪ್ಪನವರ, ಡಿ.ಕೆ. ಹೊನ್ನಪ್ಪನವರ, ಎಲ್.ಡಿ. ಪಾಟೀಲ, ವೀರಣ್ಣ ಅಂಗಡಿ, ಸಿ.ಸಿ. ನೂರಶೆಟ್ಟರ, ಡಾ. ಎಸ್.ಎಂ. ಬುರಬುರೆ, ಪರಮೇಶ ಪರಬ, ಹೊನ್ನಪ್ಪ ಶಿರಹಟ್ಟಿ, ಡಾ. ವಿಜಯದತ್ತ ಮಂಗಸೂಳಿ, ಮಹಾಂತೇಶ ದಶಮನಿ, ವೀರಯ್ಯ ಮಠಪತಿ, ಚಾಂದಸಾಬ ಮುಳಗುಂದ, ಬುಡನಶ್ಯಾ ಮಕಾನದಾರ, ತಹಶೀಲ್ದಾರ ಕೆ. ರಾಘವೇಂದ್ರ ರಾವ್, ಪಿಎಸ್ಐ ಈರಪ್ಪ ರಿತ್ತಿ, ಮುಖ್ಯಾಧಿಕಾರಿ ಎನ್.ಎಂ. ಹಾದಿಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

---


ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## ಭೂಸ್ವಾಧೀನ ಪ್ರಕ್ರಿಯೆ ಶೀಘ್ರ ಪೂರ್ಣಗೊಳಿಸಲು ಸ್ಪೀಕರ್ ಜಿ.ಎಸ್. ಪಾಟೀಲರಿಗೆ ಮನವಿ

# ಗದಗ-ಯಲವಿಗಿ ರೈಲು ಮಾರ್ಗಕ್ಕೆ ವೇಗ ನೀಡಿ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಬಹುನಿರೀಕ್ಷಿತ ಗದಗಯಲವಿಗಿ ರೈಲು ಮಾರ್ಗ ಯೋಜನೆಯ ಭೂಸ್ವಾಧೀನ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸಿ ಯೋಜನೆಗೆ ವೇಗ ನೀಡಬೇಕು ಎಂದು ಗದಗಶಿರಹಟ್ಟಿಯಲವಿಗಿ ರೈಲ್ವೆ ಮಾರ್ಗ ಹೋರಾಟ ಸಮಿತಿ ವತಿಯಿಂದ ವಿಧಾನಸಭಾಧ್ಯಕ್ಷ ಜಿ.ಎಸ್. ಪಾಟೀಲ ಅವರಿಗೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಸಮಿತಿಯ ಅಧ್ಯಕ್ಷ ಈರಣ್ಣ ಕೋಟಿ ಹಾಗೂ ಉಪಾಧ್ಯಕ್ಷ ರಾಯೇಸಾಬ ಢಾಲಾಯತ ಮಾತನಾಡಿ, 202122ನೇ ಸಾಲಿನ ಬಜೆಟ್‌ನಲ್ಲಿ ಗದಗಯಲವಿಗಿ ರೈಲು ಮಾರ್ಗ ಯೋಜನೆ ಘೋಷಣೆಯಾಗಿತ್ತು. ಆದರೆ, ಯೋಜನೆಯ ಅನುಷ್ಠಾನಕ್ಕೆ ಅಗತ್ಯವಾದ ಭೂಸ್ವಾಧೀನ ಪ್ರಕ್ರಿಯೆ ನಿರೀಕ್ಷಿತ ವೇಗದಲ್ಲಿ ಪೂರ್ಣಗೊಂಡಿಲ್ಲ ಎಂದು ತಿಳಿಸಿದರು. ಯೋಜನೆಯ ಭೂಸ್ವಾಧೀನ ಪ್ರಕ್ರಿಯೆ ವಿಳಂಬವಾಗುತ್ತಿರುವುದರಿಂದ ರೈಲು ಮಾರ್ಗದ ಕಾಮಗಾರಿ ಆರಂಭಕ್ಕೂ ಹಿನ್ನಡೆಯಾಗುವ ಆತಂಕವಿದೆ. ಈ ಹಿನ್ನೆಲೆಯಲ್ಲಿ ಯೋಜನೆಯ ಮಹತ್ವವನ್ನು ಪರಿಗಣಿಸಿ ಭೂಸ್ವಾಧೀನ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸಲು ಸಂಬಂಧಪಟ್ಟ ಇಲಾಖೆಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ರಾಜ್ಯದ ಜ್ವಲಂತ ಸಮಸ್ಯೆಗಳಿಗೆ ತಮ್ಮ ಅನುಭವ ಮತ್ತು ಮಾರ್ಗದರ್ಶನದ ಮೂಲಕ ಸೂಕ್ತ ಪರಿಹಾರ ಕಂಡುಕೊಳ್ಳುವ ಪ್ರಯತ್ನ ಮಾಡುತ್ತಿರುವ ನೀವು, ತಮ್ಮ ಅವಧಿಯಲ್ಲಿ ಈ ಮಹತ್ವಾಕಾಂಕ್ಷಿ ಯೋಜನೆಯ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳ್ಳುವಂತೆ ವಿಶೇಷ ಗಮನ ಹರಿಸಬೇಕು ಎಂದು ಹೋರಾಟ ಸಮಿತಿಯ ಪದಾಧಿಕಾರಿಗಳು ವಿನಂತಿಸಿದರು. ಈ ಸಂದರ್ಭದಲ್ಲಿ ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ವಿಶ್ವನಾಥ ಕಪ್ಪತ್ತನವರ, ಹುಮಾಯೂನ್ ಮಾಗಡಿ, ಸಿ.ಸಿ. ನೂರಶೆಟ್ಟರ, ಡಾ. ಸುನೀಲ ಬುರಬುರೆ, ಅತ್ತಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.



---

## ರೈತರಿಗೆ ಎಕರೆಗೆ ₹50 ಸಾವಿರ ಪರಿಹಾರಕ್ಕೆ ಒತ್ತಾಯಿಸಿ ಬಿಜೆಪಿ ಪ್ರತಿಭಟನೆ

# ಬರ ಘೋಷಿಸಿ, ರೈತರನ್ನು ಉಳಿಸಿ



**ವಿಜಯಸಾಕ್ಷಿ ಸುದ್ದಿ, ಗದಗ**

ಮಳೆ ಕೈಕೊಟ್ಟು ಕಣ್ಣೆದುರೇ ಮುಂಗಾರು ಬೆಳೆಗಳು ಒಣಗುತ್ತಿದ್ದರೂ ಸರ್ಕಾರ ರೈತರ ನೆರವಿಗೆ ಧಾವಿಸುತ್ತಿಲ್ಲ ಎಂಬ ಆಕ್ರೋಶ ಗದಗದಲ್ಲಿ ಶುಕ್ರವಾರ ಮೊಳಗಿತು. ಗದಗ ತಾಲೂಕನ್ನು ಕೂಡಲೇ ಬರಪೀಡಿತ ಪ್ರದೇಶವೆಂದು ಘೋಷಿಸಬೇಕು ಹಾಗೂ ಸಂಕಷ್ಟದಲ್ಲಿರುವ ರೈತರಿಗೆ ಪ್ರತಿ ಎಕರೆಗೆ 50 ಸಾವಿರ ರೂ. ಪರಿಹಾರ ನೀಡಬೇಕು ಎಂದು ಒತ್ತಾಯಿಸಿ ಭಾರತೀಯ ಜನತಾ ಪಾರ್ಟಿಯ ಗದಗ ವಿಧಾನಸಭಾ ಕ್ಷೇತ್ರದ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಮಳೆಯ ಕೊರತೆಯಿಂದ ತಾಲೂಕಿನಾದ್ಯಂತ ಕೃಷಿ ಚಟುವಟಿಕೆಗಳು ತೀವ್ರ ಹೊಡೆತಕ್ಕೊಳಗಾಗಿದ್ದು, ಸಾವಿರಾರು ರೂಪಾಯಿ ಖರ್ಚು ಮಾಡಿ ಬಿತ್ತನೆ ಮಾಡಿದ ರೈತರು ಇದೀಗ ಬೆಳೆ ನಷ್ಟದ ಭೀತಿಯಲ್ಲಿ ಸಿಲುಕಿದ್ದಾರೆ. ಈ ಹಿನ್ನೆಲೆಯಲ್ಲಿ ರೈತರ ನೆರವಿಗೆ ಸರ್ಕಾರ ತಕ್ಷಣವೇ ಬರಬೇಕೆಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಬಿಜೆಪಿ ಗದಗ ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ, ಗದಗ ತಾಲೂಕಿನಲ್ಲಿ ಸಮರ್ಪಕ ಮಳೆಯಾಗದೆ ರೈತರು ಅಪಾರ ನಷ್ಟ ಅನುಭವಿಸುತ್ತಿದ್ದಾರೆ. ಹೆಸರು, ಗೋವಿನಜೋಳ, ಹತ್ತಿ, ಈರುಳ್ಳಿ, ಸೋಯಾಬಿನ್, ಉದ್ದು ಹಾಗೂ ಶೇಂಗಾ ಸೇರಿದಂತೆ ವಿವಿಧ ಮುಂಗಾರು ಬೆಳೆಗಳನ್ನು ರೈತರು ಬಿತ್ತನೆ ಮಾಡಿದ್ದರು. ಆದರೆ, ನಿರೀಕ್ಷಿತ ಮಳೆ ಸುರಿಯದ ಪರಿಣಾಮ ಬೆಳೆಗಳು ಒಣಗುತ್ತಿದ್ದು, ರೈತರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕ ಹಾಗೂ ಕೃಷಿ ಕಾರ್ಮಿಕರ ಕೂಲಿಗಾಗಿ ರೈತರು ಸಾವಿರಾರು ರೂಪಾಯಿ ವೆಚ್ಚ ಮಾಡಿದ್ದಾರೆ. ಸಾಲ ಮಾಡಿ ಕೃಷಿಯಲ್ಲಿ ಹಣ ಹೂಡಿದ ಅನೇಕ ರೈತರು ಈಗ ಬೆಳೆ ನಷ್ಟದಿಂದ ಕಂಗಾಲಾಗಿದ್ದಾರೆ. ಬೆಳೆ ಉಳಿಯದಿದ್ದರೆ ರೈತ ಕುಟುಂಬಗಳ ಬದುಕಿನ ಮೇಲೆಯೇ ಗಂಭೀರ ಪರಿಣಾಮ ಬೀಳಲಿದೆ ಎಂದು ಹೇಳಿದರು.

> **ಮಳೆ ಕೈಕೊಟ್ಟು ರೈತರು ಕಂಗಾಲಾಗಿದ್ದಾರೆ. ಸಾವಿರಾರು ರೂಪಾಯಿ ಖರ್ಚು ಮಾಡಿ ಬೆಳೆದ ಬೆಳೆಗಳು ಕಣ್ಣೆದುರೇ ಒಣಗುತ್ತಿವೆ. ಇಂತಹ ಸಂಕಷ್ಟದ ಸಂದರ್ಭದಲ್ಲಿ ಸರ್ಕಾರ ರೈತರ ನೆರವಿಗೆ ಧಾವಿಸಬೇಕು. ಕೂಡಲೇ ಗದಗ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ, ರೈತರಿಗೆ ಪ್ರತಿ ಎಕರೆಗೆ 50 ಸಾವಿರ ರೂ. ಪರಿಹಾರ ನೀಡಬೇಕು. ಇಲ್ಲವಾದರೆ ರೈತರೊಂದಿಗೆ ಸೇರಿ ಇನ್ನಷ್ಟು ತೀವ್ರ ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ.**
> **- ತೋಟಪ್ಪ (ರಾಜು) ಕುರುಡಗಿ,** ಬಿಜೆಪಿ ಗದಗ ಜಿಲ್ಲಾ ಅಧ್ಯಕ್ಷ

ಗದಗ ತಾಲೂಕಿನ ವಾಸ್ತವ ಬರ ಪರಿಸ್ಥಿತಿಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಯಾವುದೇ ವಿಳಂಬ ಮಾಡದೆ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಬೇಕು. ಜೊತೆಗೆ ನಷ್ಟ ಅನುಭವಿಸಿರುವ ರೈತರಿಗೆ ಪ್ರತಿ ಎಕರೆಗೆ 50 ಸಾವಿರ ರೂ. ಪರಿಹಾರ ನೀಡಿ ಅವರ ಬದುಕಿಗೆ ಆಸರೆಯಾಗಬೇಕು ಎಂದು ಅವರು ಆಗ್ರಹಿಸಿದರು.

ಬಿಜೆಪಿ ಗದಗ ಜಿಲ್ಲಾ ಅಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಮಾತನಾಡಿ, ರೈತರ ಸಂಕಷ್ಟದ ಸಂದರ್ಭದಲ್ಲಿ ಸರ್ಕಾರ ನಿರ್ಲಕ್ಷ್ಯ ಧೋರಣೆ ಅನುಸರಿಸಿದರೆ ಅದನ್ನು ಬಿಜೆಪಿ ಸಹಿಸುವುದಿಲ್ಲ ಎಂದು ಎಚ್ಚರಿಸಿದರು.

ರೈತರ ಬೇಡಿಕೆಗಳಿಗೆ ಸರ್ಕಾರ ಮತ್ತು ಜಿಲ್ಲಾಡಳಿತ ಕೂಡಲೇ ಸ್ಪಂದಿಸಬೇಕು. ಗದಗ ತಾಲೂಕಿನ ಬರ ಪರಿಸ್ಥಿತಿಯನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ರೈತರೊಂದಿಗೆ ಸೇರಿ ಜಿಲ್ಲಾಧಿಕಾರಿಗಳ ಕಚೇರಿ ಎದುರು ಬೃಹತ್ ಪ್ರತಿಭಟನೆ ಹಾಗೂ ಧರಣಿ ನಡೆಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು. ಪಕ್ಷದ ಹಿರಿಯ ಮುಖಂಡ ಎಂ.ಎಸ್. ಕರಿಗೌಡ್ರ ಸಂದರ್ಭೋಚಿತವಾಗಿ ಮಾತನಾಡಿದರು.

ಪ್ರತಿಭಟನೆಯಲ್ಲಿ ವಿವಿಧ ಮೋರ್ಚಾಗಳ ಜಿಲ್ಲಾ ಅಧ್ಯಕ್ಷರಾದ ಡಿ.ವೈ. ಹುನಗುಂದ, ವೈ.ಪಿ. ಅಡ್ನೂರ, ಪ್ರಧಾನ ಕಾರ್ಯದರ್ಶಿಗಳಾದ ಮಹೇಶ ಶಿರಹಟ್ಟಿ, ಅಶೋಕ ಬ್ಯಾಹಟ್ಟಿ, ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಜಿಲ್ಲಾ ಉಪಾಧ್ಯಕ್ಷರಾದ ನಿಂಗಪ್ಪ ಹುಗ್ಗಿ, ಶೇಖಣ್ಣ ಕನ್ಯಾಳ ಸೇರಿದಂತೆ ಪಕ್ಷದ ಪ್ರಮುಖರಾದ ಸಿದ್ದು ಪಲ್ಲೇದ, ಅಶೋಕ ಕರೂರ, ರವಿಕಾಂತ ಅಂಗಡಿ, ಡಿ.ಬಿ. ಕರೀಗೌಡ್ರ, ಅರವಿಂದ ಹುಲ್ಲೂರ, ನಾಗರಾಜ ಕುಲಕರ್ಣಿ, ನಾಗರಾಜ ಮದ್ನೂರ, ದಾವಲಸಾಬ ಅಣ್ಣಿಗೇರಿ, ರವಿ ವಗ್ಗನವರ, ಸೋಮರೆಡ್ಡಿ ನಡೂರ, ಸಿದ್ದಪ್ಪ ಜೊಂಡಿ, ವೆಂಕಟೇಶ ಸೂರಣಗಿ ಹಾಗೂ ಮಾಂತೇಶ ಬಾತಾಖಾನಿ ಉಪಸ್ಥಿತರಿದ್ದರು.

ರೈತ ಮೋರ್ಚಾ ಗ್ರಾಮೀಣ ಅಧ್ಯಕ್ಷ ನಿಂಗಯ್ಯ ಇಟಗಿಮಠ, ಪ್ರಧಾನ ಕಾರ್ಯದರ್ಶಿ ಸಿದ್ದಪ್ಪ ಈರಗಾರ, ಪಕ್ಕಿರೇಶ ಗುಗ್ಗರಿ, ಮಂಜುನಾಥ ಮರಿಯಪ್ಪಗೌಡ್ರ, ನೀಲಪ್ಪ ಮಹಾಲಿಂಗಪುರ, ಶಂಕರ ಕರಿಬಿಷ್ಟಿ, ಈರಪ್ಪ ಹಡಪದ, ಮಲ್ಲಾರೆಪ್ಪ ಬೆಂತೂರ, ಅಪ್ಪು ನಮಸ್ತೆಮಠ, ಬಸವರಾಜ ಅಕ್ಕಿ, ವಿರೂಪಾಕ್ಷಪ್ಪ ಹಾದಿಮನಿ, ಅಲ್ಲಾಸಾಬ ಪಿರಕಾನವರ, ಮಂಜುನಾಥ, ವಿನೋದ ಹಂಸನೂರ ಸೇರಿದಂತೆ ಹಲವಾರು ಮುಖಂಡರು ಹಾಗೂ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

---

## ಕದಾಂಪುರದಲ್ಲಿ ಸ್ಪೀಕರ್ ಜಿ.ಎಸ್. ಪಾಟೀಲಗೆ ಭವ್ಯ ಸ್ವಾಗತ

# ಸಭಾಧ್ಯಕ್ಷ ಸ್ಥಾನ ಕ್ಷೇತ್ರದ ಸೇವೆಗೆ ಅಡ್ಡಿಯಾಗದು



**ವಿಜಯಸಾಕ್ಷಿ ಸುದ್ದಿ, ಡಂಬಳ**

ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದ ಬಳಿಕ ಇದೇ ಮೊದಲ ಬಾರಿಗೆ ತಮ್ಮ ಸ್ವಕ್ಷೇತ್ರವಾದ ರೋಣ ವಿಧಾನಸಭಾ ಕ್ಷೇತ್ರದ ಮುಂಡರಗಿ ತಾಲೂಕಿನ ಡಂಬಳ ಹೋಬಳಿಗೆ ಆಗಮಿಸಿದ ವಿಧಾನಸಭಾಧ್ಯಕ್ಷ ಜಿ.ಎಸ್. ಪಾಟೀಲ ಅವರಿಗೆ ಕದಾಂಪುರ ಗ್ರಾಮದಲ್ಲಿ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಹಾಗೂ ಅಭಿಮಾನಿಗಳು ಭವ್ಯ ಸ್ವಾಗತ ಕೋರಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿ.ಎಸ್. ಪಾಟೀಲ, ಸಭಾಧ್ಯಕ್ಷ ಸ್ಥಾನದ ಜವಾಬ್ದಾರಿ ದೊರೆತಿದ್ದರೂ ರೋಣ ವಿಧಾನಸಭಾ ಕ್ಷೇತ್ರದ ಜನರ ಸೇವೆಯಲ್ಲಿ ಯಾವುದೇ ಕೊರತೆಯಾಗುವುದಿಲ್ಲ ಎಂದು ಭರವಸೆ ನೀಡಿದರು.

ನಾನು ಸಭಾಧ್ಯಕ್ಷನಾಗಿದ್ದರೂ ಕ್ಷೇತ್ರದ ಜನರೊಂದಿಗೆ ಹಾಗೂ ಕಾರ್ಯಕರ್ತರೊಂದಿಗೆ ನನ್ನ ನಿಕಟ ಸಂಪರ್ಕ ನಿರಂತರವಾಗಿರಲಿದೆ. ಸಭಾಧ್ಯಕ್ಷ ಸ್ಥಾನ ಕ್ಷೇತ್ರದ ಜನರ ಸೇವೆಗೆ ಅಡ್ಡಿಯಾಗುವುದಿಲ್ಲ. ಅದೇ ರೀತಿ, ನನ್ನಿಂದಲೂ ಸಭಾಧ್ಯಕ್ಷ ಸ್ಥಾನದ ಘನತೆಗೆ ಯಾವುದೇ ಧಕ್ಕೆಯಾಗದಂತೆ ಕಾರ್ಯನಿರ್ವಹಿಸುತ್ತೇನೆ ಎಂದು ಹೇಳಿದರು.

ತಾವು ಈ ಹಂತಕ್ಕೆ ಬರಲು ಕ್ಷೇತ್ರದ ಜನರು, ಕಾರ್ಯಕರ್ತರು ಹಾಗೂ ಹಿರಿಯರ ಪ್ರೀತಿ, ಸಹಕಾರ ಮತ್ತು ಮಾರ್ಗದರ್ಶನವೇ ಪ್ರಮುಖ ಕಾರಣವಾಗಿದೆ. ತಮಗೆ ದೊರೆತಿರುವ ಈ ಮಹತ್ವದ ಗೌರವವನ್ನು ಉಳಿಸಿಕೊಂಡು ಗದಗ ಜಿಲ್ಲೆ ಹಾಗೂ ರೋಣ ಕ್ಷೇತ್ರಕ್ಕೆ ಇನ್ನಷ್ಟು ಗೌರವ ತರುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ ಎಂದು ತಿಳಿಸಿದರು.

**ದ್ವೇಷ, ಆವೇಶವಿಲ್ಲದೆ ಸದನ ನಡೆಸುವ ಜವಾಬ್ದಾರಿ**

ವಿಧಾನಸಭೆಯ ಕಲಾಪವನ್ನು ಯಾವುದೇ ದ್ವೇಷ ಅಥವಾ ಆವೇಶಕ್ಕೆ ಅವಕಾಶ ನೀಡದೆ ಸುಸೂತ್ರವಾಗಿ ನಡೆಸುವುದು ಸಭಾಧ್ಯಕ್ಷನ ಪ್ರಮುಖ ಜವಾಬ್ದಾರಿಯಾಗಿದೆ ಎಂದು ಜಿ.ಎಸ್. ಪಾಟೀಲ ಹೇಳಿದರು. ಸಭಾಧ್ಯಕ್ಷ ಸ್ಥಾನದಲ್ಲಿದ್ದರೂ ಜನರೊಂದಿಗೆ ಒಡನಾಟ ಮುಂದುವರಿಸುವುದರ ಜತೆಗೆ ಆ ಸ್ಥಾನಕ್ಕೆ ಇರುವ ಘನತೆ ಮತ್ತು ಗೌರವವನ್ನು ಕಾಪಾಡಿಕೊಳ್ಳಬೇಕಾಗಿದೆ. ಈ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಕ್ಷೇತ್ರದ ಜನರು ಸಂಪೂರ್ಣ ಬೆಂಬಲ ನೀಡುತ್ತಾರೆ ಎಂಬ ವಿಶ್ವಾಸವಿದೆ ಎಂದರು. ಮಂತ್ರಿ ಸ್ಥಾನದ ಜವಾಬ್ದಾರಿ ಹಾಗೂ ಅದರ ವ್ಯಾಪ್ತಿಯ ಬಗ್ಗೆ ಜನರಿಗೆ ಹೆಚ್ಚಿನ ಅರಿವಿದೆ. ಆದರೆ ಸಭಾಧ್ಯಕ್ಷ ಸ್ಥಾನದ ಕರ್ತವ್ಯ ಮತ್ತು ಜವಾಬ್ದಾರಿಗಳ ಕುರಿತು ಹಲವರಿಗೆ ಪೂರ್ಣ ಮಾಹಿತಿ ಇಲ್ಲ. ಇದರಿಂದ ಇನ್ನು ಮುಂದೆ ತಾವು ಕ್ಷೇತ್ರದ ಜನರ ಕೈಗೆ ಸುಲಭವಾಗಿ ಸಿಗುವುದಿಲ್ಲ ಎಂಬ ಪ್ರೀತಿಯ ಆತಂಕ ಕೆಲವರಲ್ಲಿದೆ ಎಂದು ಹೇಳಿದರು.

> **ಸಭಾಧ್ಯಕ್ಷ ಸ್ಥಾನ ನನಗೆ ದೊರೆತಿರುವುದು ದೊಡ್ಡ ಜವಾಬ್ದಾರಿಯಾಗಿದೆ. ಆದರೆ ಈ ಜವಾಬ್ದಾರಿ ನನ್ನ ಕ್ಷೇತ್ರದ ಜನರ ಸೇವೆಗೆ ಎಂದಿಗೂ ಅಡ್ಡಿಯಾಗುವುದಿಲ್ಲ. ಜನರೊಂದಿಗೆ ನಿಕಟ ಸಂಪರ್ಕ ಉಳಿಸಿಕೊಂಡು, ಸಭಾಧ್ಯಕ್ಷ ಸ್ಥಾನದ ಘನತೆಯನ್ನು ಕಾಪಾಡುತ್ತಲೇ ಗದಗ ಜಿಲ್ಲೆ ಮತ್ತು ರೋಣ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತೇನೆ.**
> **- ಜಿ.ಎಸ್. ಪಾಟೀಲ,** ಕರ್ನಾಟಕ ವಿಧಾನಸಭಾಧ್ಯಕ್ಷರು

ಆದರೆ, ಕೆಲವೇ ತಿಂಗಳುಗಳಲ್ಲಿ ಸಭಾಧ್ಯಕ್ಷ ಸ್ಥಾನದ ಜವಾಬ್ದಾರಿ ಹಾಗೂ ಅದರ ವ್ಯಾಪ್ತಿಯ ಬಗ್ಗೆ ಎಲ್ಲರಿಗೂ ಸ್ಪಷ್ಟ ಅರಿವಾಗಲಿದೆ. ಕ್ಷೇತ್ರದ ಜನರೊಂದಿಗಿನ ಸಂಬಂಧ ಮತ್ತು ಸಂಪರ್ಕದಲ್ಲಿ ಯಾವುದೇ ಅಂತರ ಉಂಟಾಗುವುದಿಲ್ಲ ಎಂದು ಭರವಸೆ ನೀಡಿದರು.

ಸಭಾಧ್ಯಕ್ಷರಾದ ಬಳಿಕ ಡಂಬಳ ಹೋಬಳಿ ಭಾಗಕ್ಕೆ ಮೊದಲ ಬಾರಿಗೆ ಆಗಮಿಸಿದ ಹಿನ್ನೆಲೆಯಲ್ಲಿ ಕದಾಂಪುರ ಗ್ರಾಮದಲ್ಲಿ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಹಾಗೂ ಅಭಿಮಾನಿಗಳು ಜಿ.ಎಸ್. ಪಾಟೀಲ ಅವರನ್ನು ಆತ್ಮೀಯವಾಗಿ ಬರಮಾಡಿಕೊಂಡರು. ಹೂಮಾಲೆ ಹಾಕಿ ಸನ್ಮಾನಿಸಿ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ರೋಣ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಸಂಗನಗೌಡ (ಮಿಥುನ) ಜಿ. ಪಾಟೀಲ, ಮರಿಯಪ್ಪ ಸಿದ್ದಣ್ಣವರ, ಮಹೇಶ ಗಡಗಿ, ಸೋಮಣ್ಣ ಗುಡ್ಡದ, ಕುಬೇರಪ್ಪ ಕೊಳ್ಳಾರ, ರೇವಣಸಿದ್ದ ಕರಿಗಾರ, ಕಳ್ಳೆಪ್ಪ ಪೂಜಾರ, ಬಸವರಡ್ಡಿ ಬಂಡಿಹಾಳ, ಬಾಬುಸಾಬ ಮೂಲಿಮನಿ, ನೂರಹಮ್ಮದ ಸರಕಾವಾಸ, ಕನಕಮೂರ್ತಿ ನರೇಗಲ್ಲ, ಮಲ್ಲಿಕಾರ್ಜುನ ಕಾರಪುಡಿ, ಜಯಮ್ಮ ಯಲಭೋವಿ, ಮಹಾದೇವಮ್ಮ ಕೊಳ್ಳಾರ, ಜ್ಯೋತಿ ಕುರಿ, ಕುಬೇರ ನಾಯ್ಕ, ನಾಗರಾಜ ಸಜ್ಜನ, ಸುರೇಶ ಗಡಗಿ, ಮಾರುತಿ ಎಮ್ಮಿ, ಕಾಶಣ್ಣ ಅಳವಂಡಿ, ಹನಮಂತ ಗದಗಿನ, ಮಲ್ಲಿಕಾರ್ಜುನ ಪ್ಯಾಟಿ, ಬಶೀರಹಮ್ಮದ ಒಡ್ಡಟ್ಟಿ ಸೇರಿದಂತೆ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದರು.

---

# ನುಲಿಯ ಚಂದಯ್ಯನವರ ಕಾಯಕನಿಷ್ಠೆ ಯುವಜನತೆಗೆ ಮಾದರಿ

**ವಿಜಯಸಾಕ್ಷಿ ಸುದ್ದಿ, ಗದಗ**

12ನೇ ಶತಮಾನದ ಶಿವಶರಣ ನುಲಿಯ ಚಂದಯ್ಯನವರು ತಮ್ಮ ಬದುಕಿನ ಮೂಲಕ ಸಾರಿದ ಕಾಯಕನಿಷ್ಠೆ ಹಾಗೂ ದುಡಿಮೆಯೇ ದೇವರು' ಎಂಬ ಸಂದೇಶ ಇಂದಿನ ಆಧುನಿಕ ಸಮಾಜದಲ್ಲಿಯೂ ಅತ್ಯಂತ ಪ್ರಸ್ತುತವಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ನಗರದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ನುಲಿಯ ಚಂದಯ್ಯ ಜಯಂತಿ2026 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಬಸವಣ್ಣನವರ ಸಮಕಾಲೀನರಾಗಿದ್ದ ನುಲಿಯ ಚಂದಯ್ಯನವರು ಕಾಯಕದ ಮೂಲಕ ಜೀವನ ಸಾಗಿಸುತ್ತಿದ್ದರು. ತಮ್ಮ ದುಡಿಮೆಯಿಂದ ಗಳಿಸಿದ ಸಂಪತ್ತಿನಲ್ಲಿಯೇ ಇತರರಿಗೆ ದಾಸೋಹ ಮಾಡುತ್ತಾ, ಕಾಯಕವೇ ಕೈಲಾಸ' ಎಂಬ ತತ್ವವನ್ನು ಬದುಕಿನಲ್ಲಿ ಅಳವಡಿಸಿಕೊಂಡ ಮಹಾನ್ ಶಿವಶರಣರಾಗಿದ್ದರು ಎಂದು ಹೇಳಿದರು.

ಕಾಯಕಕ್ಕೆ ಗೌರವ ನೀಡುವುದು, ಸ್ವಾವಲಂಬಿಯಾಗಿ ಬದುಕುವುದು, ಪ್ರಾಮಾಣಿಕವಾಗಿ ದುಡಿಯುವುದು ಹಾಗೂ ಸಮಾಜದ ಒಳಿತಿಗಾಗಿ ತಮ್ಮದೇ ಆದ ಕೊಡುಗೆ ನೀಡುವುದು ನುಲಿಯ ಚಂದಯ್ಯನವರ ಜೀವನದ ಪ್ರಮುಖ ಸಂದೇಶಗಳಾಗಿವೆ. ಇಂತಹ ಮಹನೀಯರ ಜೀವನಾದರ್ಶಗಳನ್ನು ಇಂದಿನ ಯುವಜನತೆ ಅಳವಡಿಸಿಕೊಂಡು ಮುನ್ನಡೆಯಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ್ ಕೆ.ಆರ್., ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ ವಿ. ಬಳ್ಳಾರಿ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.ಬಾಹುಬಲಿ ಜೈನ್ ಕಾರ್ಯಕ್ರಮ ನಿರೂಪಿಸಿ, ವಂದನಾರ್ಪಣೆ ಸಲ್ಲಿಸಿದರು.

---





**ಗದಗ: ರಕ್ಷಾ ಬಂಧನ ಹಬ್ಬದ ಅಂಗವಾಗಿ ತಾಲೂಕಿನ ಮಲ್ಲಸಮುದ್ರ ಗ್ರಾಮದ ಅಕ್ಕತಂಗಿಯರಾದ ಶ್ರೇಯಾ ಕಡ್ಲಿಮಟ್ಟಿ ಹಾಗೂ ಅಶ್ವಿನಿ ಹುಣಸಿಮರದ ಅವರು ಸಹೋದರರಾದ ಶ್ರೇಯಂ ಕಡ್ಲಿಮಟ್ಟಿ ಮತ್ತು ಅಭಿಷೇಕ ಕಟ್ಟಿಮನಿ ಅವರಿಗೆ ರಾಖಿ ಕಟ್ಟಿ ಹಬ್ಬ ಆಚರಿಸಿದರು.**

### ಗಜೇಂದ್ರಗಡ ಹೊರತುಪಡಿಸಿ ಉಳಿದ ತಾಲೂಕುಗಳಿಗೂ ಬರ ಘೋಷಣೆಗೆ ಒತ್ತಾಯ

# ಒಂದೇ ಜಿಲ್ಲೆಯಲ್ಲಿ ಎರಡು ನ್ಯಾಯವೇ?

**ವಿಜಯಸಾಕ್ಷಿ ಸುದ್ದಿ, ಗದಗ**



ಗದಗ ಜಿಲ್ಲೆಯಲ್ಲಿ ಮಳೆ ಕೊರತೆ ಹಾಗೂ ಬರ ಪರಿಸ್ಥಿತಿಯಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಬೆಳೆಗಳು ಹಾನಿಗೊಳಗಾಗಿವೆ. ರೈತರ ಬದುಕು ದುಸ್ತರವಾಗಿರುವ ಹಿನ್ನೆಲೆಯಲ್ಲಿ ಸರ್ಕಾರ ಕೂಡಲೇ ನೆರವಿಗೆ ಧಾವಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ರವಿ ವಗ್ಗನವರ ಆಗ್ರಹಿಸಿದ್ದಾರೆ.

ಗದಗ ಜಿಲ್ಲೆಯ ಗಜೇಂದ್ರಗಡ ತಾಲೂಕನ್ನು ಮಾತ್ರ ಬರಪೀಡಿತ ಎಂದು ಘೋಷಿಸಿ, ಜಿಲ್ಲೆಯ ಉಳಿದ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸದಿರುವ ಸರ್ಕಾರದ ಕ್ರಮವನ್ನು ಅವರು ತೀವ್ರವಾಗಿ ಖಂಡಿಸಿದ್ದಾರೆ.

ಜಿಲ್ಲೆಯ ಇತರೆ ತಾಲೂಕುಗಳಲ್ಲಿಯೂ ಮಳೆ ಕೊರತೆ ಹಾಗೂ ಬೆಳೆ ನಷ್ಟದಿಂದ ರೈತರು ಸಂಕಷ್ಟದಲ್ಲಿದ್ದಾರೆ. ಸರ್ಕಾರ ಯಾವುದೇ ತಾರತಮ್ಯ ಮಾಡದೆ ವಾಸ್ತವ ಪರಿಸ್ಥಿತಿಯ ಆಧಾರದ ಮೇಲೆ ಜಿಲ್ಲೆಯ ಎಲ್ಲ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಬೇಕು ಎಂದು ಒತ್ತಾಯಿಸಿದ್ದಾರೆ.

ಗದಗ ಜಿಲ್ಲೆಯ ಎಲ್ಲ ತಾಲೂಕುಗಳನ್ನು ಸಂಪೂರ್ಣ ಬರಪೀಡಿತ ಪ್ರದೇಶವೆಂದು ಘೋಷಿಸಿ, ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಪ್ರತಿ ಎಕರೆಗೆ ₹50 ಸಾವಿರ ಪರಿಹಾರ ನೀಡಬೇಕು. ಜಿಲ್ಲೆಯಲ್ಲಿ ಸಮಗ್ರ ಹಾಗೂ ಪಾರದರ್ಶಕ ಬೆಳೆ ನಷ್ಟ ಸಮೀಕ್ಷೆ ನಡೆಸಿ, ಅರ್ಹ ಪ್ರತಿಯೊಬ್ಬ ರೈತನಿಗೂ ಪರಿಹಾರ ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ರೈತರಿಗೆ ದೊರೆಯಬೇಕಿರುವ ಬೆಳೆ ವಿಮೆ ಪರಿಹಾರವನ್ನು ಕೂಡಲೇ ಬಿಡುಗಡೆ ಮಾಡಬೇಕು. ಬರ ಪರಿಸ್ಥಿತಿಯಿಂದ ಜಾನುವಾರುಗಳಿಗೂ ಸಂಕಷ್ಟ ಎದುರಾಗಿರುವುದರಿಂದ ಗ್ರಾಮೀಣ ಪ್ರದೇಶಗಳಲ್ಲಿ ಅಗತ್ಯ ಪ್ರಮಾಣದ ಮೇವು ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಬರದಿಂದ ಸಂಕಷ್ಟದಲ್ಲಿರುವ ರೈತರಿಗೆ ವಿಶೇಷ ಬರ ಪರಿಹಾರ ಪ್ಯಾಕೇಜ್ ಘೋಷಿಸಬೇಕು ಎಂದು ಅವರು ತಿಳಿಸಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವರು ನಡೆಸಿರುವ ಬರ ಅಧ್ಯಯನದಿಂದ ರೈತರಿಗೆ ಏನು ಪ್ರಯೋಜನವಾಗಿದೆ ಎಂದು ಪ್ರಶ್ನಿಸಿರುವ ರವಿ ವಗ್ಗನವರ, ಬರ ಅಧ್ಯಯನ ಕೇವಲ ಕಾಗದಕ್ಕೆ ಸೀಮಿತವಾಗದೆ, ಅದರ ಆಧಾರದ ಮೇಲೆ ರೈತರ ಸಂಕಷ್ಟಕ್ಕೆ ತಕ್ಷಣವೇ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ರೈತರ ನೋವು, ಬೆಳೆ ನಷ್ಟ ಹಾಗೂ ಸಂಕಷ್ಟವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ರೈತರ ತಾಳ್ಮೆಯನ್ನು ಪರೀಕ್ಷಿಸದೆ ಜಿಲ್ಲೆಯ ಎಲ್ಲ ತಾಲೂಕುಗಳ ರೈತರಿಗೆ ಸಮಾನವಾಗಿ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದ್ದಾರೆ.

ಸರ್ಕಾರ ಕೂಡಲೇ ಗದಗ ಜಿಲ್ಲೆಯ ಎಲ್ಲ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿ, ಪ್ರತಿ ಎಕರೆಗೆ ₹50 ಸಾವಿರ ಬೆಳೆ ನಷ್ಟ ಪರಿಹಾರ ನೀಡಲು ಕ್ರಮ ಕೈಗೊಳ್ಳದಿದ್ದರೆ ರೈತರ ನೇತೃತ್ವದಲ್ಲಿ ಜಿಲ್ಲಾ ಆಡಳಿತ ಭವನಕ್ಕೆ ಮುತ್ತಿಗೆ ಹಾಕಿ ಪ್ರಜಾಸತ್ತಾತ್ಮಕ ರೀತಿಯಲ್ಲಿ ತೀವ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದ್ದಾರೆ.

> **ಗಜೇಂದ್ರಗಡ ತಾಲೂಕನ್ನು ಮಾತ್ರ ಬರಪೀಡಿತ ಎಂದು ಘೋಷಿಸಿ ಜಿಲ್ಲೆಯ ಉಳಿದ ತಾಲೂಕುಗಳ ರೈತರನ್ನು ಕಡೆಗಣಿಸುವುದು ಸರಿಯಲ್ಲ. ಮಳೆ ಕೊರತೆ ಮತ್ತು ಬೆಳೆ ನಷ್ಟದಿಂದ ಇಡೀ ಜಿಲ್ಲೆಯ ರೈತರು ಸಂಕಷ್ಟದಲ್ಲಿದ್ದಾರೆ. ಸರ್ಕಾರ ಕೂಡಲೇ ಗದಗ ಜಿಲ್ಲೆಯನ್ನು ಸಂಪೂರ್ಣ ಬರಪೀಡಿತ ಜಿಲ್ಲೆ ಎಂದು ಘೋಷಿಸಿ, ಪ್ರತಿ ಎಕರೆಗೆ ₹50 ಸಾವಿರ ಪರಿಹಾರ ನೀಡಬೇಕು. ಇಲ್ಲವಾದರೆ ರೈತರೊಂದಿಗೆ ಸೇರಿ ಜಿಲ್ಲಾ ಆಡಳಿತ ಭವನಕ್ಕೆ ಮುತ್ತಿಗೆ ಹಾಕಿ ತೀವ್ರ ಹೋರಾಟ ನಡೆಸಲಾಗುವುದು.**
>
> – **ರವಿ ವಗ್ಗನವರ,** ಜಿಲ್ಲಾ ಕಾರ್ಯಾಧ್ಯಕ್ಷ, ಕರ್ನಾಟಕ ರಾಜ್ಯ ರೈತ ಸಂಘ, ಗದಗ

ಬರ ಪರಿಹಾರ, ಬೆಳೆ ವಿಮೆ, ಜಾನುವಾರುಗಳಿಗೆ ಮೇವು ಹಾಗೂ ಕುಡಿಯುವ ನೀರು ಸೇರಿದಂತೆ ರೈತರಿಗೆ ಸಿಗಬೇಕಾದ ಎಲ್ಲ ಸೌಲಭ್ಯಗಳನ್ನು ಯಾವುದೇ ವಿಳಂಬವಿಲ್ಲದೆ ಒದಗಿಸಬೇಕು ಎಂದು ಸರ್ಕಾರವನ್ನು ಆಗ್ರಹಿಸಿದ್ದಾರೆ.

---

### ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಹಾದಿಮನಿಗೂ ಗೌರವ

## ಈದ್-ಮಿಲಾದ್ ಅಂಗವಾಗಿ ಪೌರಕಾರ್ಮಿಕರಿಗೆ ಸನ್ಮಾನ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**



ಈದ್-ಮಿಲಾದ್ ಹಬ್ಬದ ಪ್ರಯುಕ್ತ ಜಾತ್ಯತೀತ ಜನತಾ ಪಕ್ಷದ ಶಿರಹಟ್ಟಿ ನಗರ ಘಟಕದ ವತಿಯಿಂದ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಎನ್.ಎಂ. ಹಾದಿಮನಿ ಹಾಗೂ ಪೌರಕಾರ್ಮಿಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ನಗರ ಘಟಕದ ಅಧ್ಯಕ್ಷ ರಾಯಸಾಬ್ ಡಾಲಾಯತ್, ಗೌರವಾಧ್ಯಕ್ಷ ಫಕೀರಪ್ಪ ತುಳಿ, ತಾಲೂಕು ಅಧ್ಯಕ್ಷ ಶರಣಪ್ಪ ಹೂಗಾರ್, ಮೆಹಬೂಬ್‌ಸಾಬ್ ಕನಕವಾಡ, ಮಹಿಳಾ ತಾಲೂಕು ಅಧ್ಯಕ್ಷೆ ಲಲಿತಾ ಕಲ್ಲಪ್ಪನವರ, ವಿನಾಯಕ್ ಪರಬತ, ನಜೀರ್ ಆದ್ರಳ್ಳಿ, ಶಿವು ಪಾಟೀಲ, ಬಸು ಕಲ್ಲಪ್ಪನವರ ಸೇರಿದಂತೆ ಇತರರು ಉಪಸ್ಥಿತರಿದ್ದರು.

---

## ಇಂದು ಬೀಚಿ ಬಳಗದ ಮಾಸಿಕ ಸಭೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಬೀಚಿ ಬಳಗ ಹಾಗೂ ಕೆ.ಎಸ್.ಎಸ್. ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ಬೀಚಿ ಬಳಗದ ಮಾಸಿಕ ಸಭೆಯನ್ನು ಆ. 29ರಂದು ಶನಿವಾರ ಮಧ್ಯಾಹ್ನ 2 ಗಂಟೆಗೆ ಕೆ.ಎಸ್.ಎಸ್. ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದೆ.

ಹಿರೇಮಠದ ಷ.ಬ್ರ. ಮಲ್ಲಿಕಾರ್ಜುನ ಶಿವಾಚಾರ್ಯರ ದಿವ್ಯ ಸಾನಿಧ್ಯದಲ್ಲಿ ನಡೆಯುವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬೀಚಿ ಬಳಗದ ಅಧ್ಯಕ್ಷ ಶಿವಯೋಗಿ ಜಕ್ಕಲಿ ವಹಿಸಲಿದ್ದಾರೆ. ಕನಕದಾಸ ಶಿಕ್ಷಣ ಸಮಿತಿ, ಗದಗದ ಚೇರಮನ್ ರವೀಂದ್ರನಾಥ ಬಿ. ದಂಡಿನ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಅಂತೂರು-ಬೆಂತೂರಿನ ಸರ್ಕಾರಿ ಪ್ರೌಢಶಾಲೆಯ ಮುಖ್ಯಶಿಕ್ಷಕ ಎಸ್.ಬಿ. ದೊಡ್ಡಣ್ಣವರ ಉಪನ್ಯಾಸ ನೀಡಲಿದ್ದು, ನರೇಗಲ್ಲದ ವೈದ್ಯ ಡಾ. ಕೆ.ಬಿ. ಧನ್ನೂರ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಸಭೆಯಲ್ಲಿ ಬೀಚಿ ಬಳಗದ ಪದಾಧಿಕಾರಿಗಳು ಹಾಗೂ ಸದಸ್ಯರು, ಕೆ.ಎಸ್.ಎಸ್. ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯರು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿರುವರು. ಸಾಹಿತ್ಯಾಸಕ್ತರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಆಯೋಜಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

---

### ಕಾಲೇಜು ಕ್ಯಾಂಪಸ್‌ಗಳಿಂದ ವಿದ್ಯಾರ್ಥಿ ಸಂಘಟನೆಗಳನ್ನು ದೂರವಿಡುವ ಕ್ರಮಕ್ಕೆ ಎಐಡಿಎಸ್‌ಒ ತೀವ್ರ ವಿರೋಧ

## ವಿದ್ಯಾರ್ಥಿ ಸಂಘಟನೆ ನಿಷೇಧ ಚಿಂತನೆ ಕೈಬಿಡಿ

**ವಿಜಯಸಾಕ್ಷಿ ಸುದ್ದಿ, ಗದಗ**

ಪಿಯು ಹಾಗೂ ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿ ಸಂಘಗಳ ಚುನಾವಣೆ ನಡೆಯಲಿರುವ ಸಂದರ್ಭದಲ್ಲಿ ವಿದ್ಯಾರ್ಥಿ ಸಂಘಟನೆಗಳನ್ನು ಕ್ಯಾಂಪಸ್‌ನಿಂದ ದೂರವಿಡಲು ರಾಜ್ಯ ಸರ್ಕಾರ ಮುಂದಾಗಿರುವ ಕ್ರಮವನ್ನು ಎಐಡಿಎಸ್‌ಒ ಗದಗ ಜಿಲ್ಲಾ ಘಟಕ ತೀವ್ರವಾಗಿ ಖಂಡಿಸಿದೆ.

ಶಿಕ್ಷಣ ವ್ಯವಸ್ಥೆ ಹಲವು ಗಂಭೀರ ಸಮಸ್ಯೆಗಳನ್ನು ಎದುರಿಸುತ್ತಿದ್ದು, ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಧ್ವನಿಯಾಗುವ ಮತ್ತು ಅವುಗಳ ಪರಿಹಾರಕ್ಕಾಗಿ ಸಂಘಟಿತ ಹೋರಾಟ ನಡೆಸುವಲ್ಲಿ ವಿದ್ಯಾರ್ಥಿ ಸಂಘಟನೆಗಳ ಪಾತ್ರ ಮಹತ್ವದ್ದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ರಾಜಕೀಯ ಪಕ್ಷಗಳಿಗೆ ಕಡಿವಾಣ ಹಾಕುವ ನೆಪದಲ್ಲಿ ವಿದ್ಯಾರ್ಥಿಗಳನ್ನು ರಾಜಕೀಯ ಮತ್ತು ಸಾಮಾಜಿಕ ಚಟುವಟಿಕೆಗಳಿಂದ ದೂರವಿಡುವುದು ಸರಿಯಲ್ಲ. ವಿದ್ಯಾರ್ಥಿ ಸಂಘಟನೆಗಳನ್ನೇ ನಿಷೇಧಿಸಿದರೆ ವಿದ್ಯಾರ್ಥಿಗಳ ಸಂಘಟಿತ ಹೋರಾಟಕ್ಕೆ ಹಿನ್ನಡೆಯಾಗಲಿದೆ ಎಂದು ಎಐಡಿಎಸ್‌ಒ ಆತಂಕ ವ್ಯಕ್ತಪಡಿಸಿದೆ.

ವಿದ್ಯಾರ್ಥಿ ಸಂಘಗಳ ಚುನಾವಣೆ ನಡೆಸುವ ಸರ್ಕಾರದ ನಿರ್ಧಾರವನ್ನು ಎಐಡಿಎಸ್‌ಒ ಬೆಂಬಲಿಸಿತ್ತು. ಆದರೆ, ಈಗ ವಿದ್ಯಾರ್ಥಿ ಸಂಘಟನೆಗಳನ್ನು ಕಾಲೇಜು ಕ್ಯಾಂಪಸ್‌ಗೆ ಪ್ರವೇಶಿಸದಂತೆ ತಡೆಯುವ ಚಿಂತನೆ ವಿದ್ಯಾರ್ಥಿ ವಿರೋಧಿ ಕ್ರಮವಾಗಿದೆ ಎಂದು ಸಂಘಟನೆ ಆರೋಪಿಸಿದೆ.

> **ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಹೋರಾಟ ನಡೆಸುವ ಸಂಘಟನೆಗಳನ್ನು ನಿಷೇಧಿಸುವುದು ಪ್ರಜಾಸತ್ತಾತ್ಮಕ ಹಕ್ಕುಗಳ ಮೇಲಿನ ದಾಳಿಯಾಗಿದೆ. ರಾಜ್ಯ ಸರ್ಕಾರ ಕೂಡಲೇ ಈ ನಿಲುವನ್ನು ಹಿಂಪಡೆದು ವಿದ್ಯಾರ್ಥಿ ಸಂಘಟನೆಗಳಿಗೆ ಮುಕ್ತವಾಗಿ ಕಾರ್ಯನಿರ್ವಹಿಸಲು ಅವಕಾಶ ನೀಡಬೇಕು.**
>
> – **ಎಂ. ಶಾಂತಿ,** ಜಿಲ್ಲಾ ಸಂಚಾಲಕಿ, ಎಐಡಿಎಸ್‌ಒ ಗದಗ

---

## ರಾಜ್ಯ ಮಟ್ಟಕ್ಕೆ ಆಯ್ಕೆಯಾದ ಕಾವ್ಯಾ ಬೆಳ್ಳಿಗೌಡರ

**ವಿಜಯಸಾಕ್ಷಿ ಸುದ್ದಿ, ಗದಗ**





ಜಿಲ್ಲಾ ಸಹಕಾರ ಯೂನಿಯನ್ ವತಿಯಿಂದ ಆಯೋಜಿಸಿದ್ದ ಜನಜೀವನದ ಸಮಗ್ರ ಅಭಿವೃದ್ಧಿಗೆ ಸಹಕಾರಿ ವ್ಯವಸ್ಥೆ ನಿರಂತರವಾಗಿ ಶ್ರಮಿಸುತ್ತಿದೆ ಎಂಬ ವಿಷಯದ ಜಿಲ್ಲಾ ಮಟ್ಟದ ಚರ್ಚಾ ಸ್ಪರ್ಧೆಯಲ್ಲಿ ನಗರದ ತೋಂಟದ ಸಿದ್ದೇಶ್ವರ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ಕಾವ್ಯಾ ಬೆಳ್ಳಿಗೌಡರ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಚರ್ಚಾ ವಿಷಯದ ವಿರುದ್ಧವಾಗಿ ಮಾತನಾಡಿದ ಕಾವ್ಯಾ ಬೆಳ್ಳಿಗೌಡರ ಪ್ರಥಮ ಬಹುಮಾನ ಪಡೆದರೆ, ವಿಷಯದ ಪರವಾಗಿ ಮಾತನಾಡಿದ ಕಾಲೇಜಿನ ವಿದ್ಯಾರ್ಥಿ ಭರತಕುಮಾರ ಬಿಳೆಯಲಿ ತೃತೀಯ ಬಹುಮಾನ ಪಡೆದಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ, ಪ್ರಾಚಾರ್ಯ ವೈ.ಎಸ್. ಮತ್ತೂರ, ಕಾಲೇಜಿನ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಶುಭ ಹಾರೈಸಿದ್ದಾರೆ.

---

## ಸಾಮೂಹಿಕ ವಿವಾಹ ಕರಪತ್ರ ಅನಾವರಣ



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಬಡ ಕುಟುಂಬಗಳ ವಿವಾಹಕ್ಕೆ ನೆರವಾಗುವ ಉದ್ದೇಶದಿಂದ ಅಂಜುಮನ ಸಂಸ್ಥೆ ವತಿಯಿಂದ ಎರಡನೇ ಬಾರಿಗೆ ಹಮ್ಮಿಕೊಳ್ಳಲಾಗಿರುವ ಸರಳ ಸಾಮೂಹಿಕ ವಿವಾಹ ಕಾರ್ಯಕ್ರಮದ ಕರಪತ್ರವನ್ನು ಪಟ್ಟಣದ ಪ್ರಸಿದ್ಧ ಸೂಫಿ ಸಂತ ಹಜರತ್ ದಾವಲ್ ಮಲ್ಲಿಕ್ ದರ್ಗಾದಲ್ಲಿ ಪ್ರಾರ್ಥನೆ ಸಲ್ಲಿಸಿ ಅನಾವರಣಗೊಳಿಸಲಾಯಿತು.

ವಿಶ್ವನಾಯಕ ಹಜರತ್ ಮೊಹಮ್ಮದ್ ಪೈಗಂಬರ್ ಅವರ 1501ನೇ ಜಯಂತಿಯ ಅಂಗವಾಗಿ ಅಕ್ಟೋಬರ್ 4ರಂದು ಮುಳಗುಂದ ಪಟ್ಟಣದಲ್ಲಿ ಸಾಮೂಹಿಕ ವಿವಾಹ ಕಾರ್ಯಕ್ರಮ ಆಯೋಜಿಸಲಾಗಿದೆ.

ಅಂಜುಮನ ಸಂಸ್ಥೆಯ ಅಧ್ಯಕ್ಷ ತಾಜುದ್ದೀನ್ ಕಿಂಡ್ರಿ, ಮಾತನಾಡಿ, ಬಡ ಕುಟುಂಬಗಳ ಅನುಕೂಲಕ್ಕಾಗಿ ಎರಡನೇ ಬಾರಿಗೆ ಸರಳ ಸಾಮೂಹಿಕ ವಿವಾಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ವಿವಾಹಕ್ಕೆ ಹೆಸರು ನೋಂದಾಯಿಸಲು ಸೆಪ್ಟೆಂಬರ್ 15 ಕೊನೆಯ ದಿನವಾಗಿದ್ದು, ಆಸಕ್ತರು ಆದಷ್ಟು ಶೀಘ್ರವಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಉಪಾಧ್ಯಕ್ಷ ಎ.ಡಿ. ಮುಜಾವರ, ಎಂ.ಎ. ಖಾಜಿ, ಲಾಲಶಾಪೀರ ಮಕಾನದಾರ, ಹೈದರ ಖವಾಸ, ದಾವಲಸಾಬ ಲಕ್ಷ್ಮೇಶ್ವರ, ಎಚ್.ಎಂ. ನದ್ದೀಮುಲ್ಲಾ, ದಾವೂದ ಜಮಾಲ್, ಮಹ್ಮದಜಾಫರ್ ಕರ್ಕಿಮುಲ್ಲಾ, ಇಮಾಮಹುಸೇನ್ ಮುಜಾವರ, ಚಮನಸಾಬ ಹಾದಿಮನಿ, ಜಾಫರ್ ಲಾಡಸಾಬನವರ, ಖಲಂದರ ಗಾಡಿ ಹಾಗೂ ಮಹ್ಮದ್ ಮಜ್ಜಿಗಿ ಸೇರಿದಂತೆ ಹಲವರು ಉಪಸ್ಥಿತರಿದ್ದು, ಸಾಮೂಹಿಕ ವಿವಾಹ ಕಾರ್ಯಕ್ರಮಕ್ಕೆ ಶುಭ ಹಾರೈಸಿದರು.

---

## ಲಕ್ಕುಂಡಿಯಲ್ಲಿ ಸಂಭ್ರಮದ ಈದ್ ಮಿಲಾದ್ ಆಚರಣೆ



**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಪ್ರವಾದಿ ಮೊಹಮ್ಮದ್ ಪೈಗಂಬರ್ ಜಯಂತಿಯ ಅಂಗವಾಗಿ ಲಕ್ಕುಂಡಿಯಲ್ಲಿ ಮುಸ್ಲಿಂ ಬಾಂಧವರು ಸಂಭ್ರಮದಿಂದ ಈದ್ ಮಿಲಾದ್ ಆಚರಿಸಿದರು.

ಅಂಜುಮನ್-ಎ-ಇಸ್ಲಾಂ ಕಮಿಟಿ ಹಾಗೂ ಟಿಪ್ಪು ಸುಲ್ತಾನ್ ಯೂತ್ ಅಸೋಸಿಯೇಷನ್ ಸಹಯೋಗದಲ್ಲಿ ಪಾಪನಾಶಿ ರಸ್ತೆಯ ಮಾಬು ಸುಬಾನಿ ದರ್ಗಾದಿಂದ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು.

ಮೆರವಣಿಗೆಯಲ್ಲಿ ಹಾಫೀಜ್ ಸಲೀಂ ಅಹ್ಮದ್ ಮಂಗಳೂರು ಅವರ ನೇತೃತ್ವದಲ್ಲಿ ಪ್ರವಾದಿ ಮೊಹಮ್ಮದ್ ಪೈಗಂಬರ್ ಅವರ ಸಂದೇಶ ಸಾರುವ ಹಾಡುಗಳನ್ನು ಹಾಡಿ ಜೈಘೋಷ ಮೊಳಗಿಸಲಾಯಿತು.

ಮೆರವಣಿಗೆ ಹಿರೇಮಸೂತಿಗೆ ತಲುಪಿದ ಬಳಿಕ ಪ್ರವಾದಿ ಮೊಹಮ್ಮದ್ ಪೈಗಂಬರ್ ಅವರ ಜೀವನ ಹಾಗೂ ಸಂದೇಶಗಳ ಕುರಿತು ಉಪನ್ಯಾಸ ಕಾರ್ಯಕ್ರಮ ನಡೆಯಿತು. ಬಳಿಕ ಸಾರ್ವಜನಿಕರಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

ಅಂಜುಮನ್-ಎ-ಇಸ್ಲಾಂ ಕಮಿಟಿ ಅಧ್ಯಕ್ಷ ನಜೀರ ಅಹ್ಮದ್ ಕಿರೀಟಗೇರಿ, ಉಪಾಧ್ಯಕ್ಷ ದಾದಸಾಬ ಕೊರ್ಲಹಳ್ಳಿ, ಟಿಪ್ಪು ಸುಲ್ತಾನ್ ಯೂತ್ ಅಸೋಸಿಯೇಷನ್ ಅಧ್ಯಕ್ಷ ಹೈದರಾಲಿ ನದಾಫ್, ಉಪಾಧ್ಯಕ್ಷ ರಿಯಾಜ್ ಮಸೂತಿ ಸೇರಿದಂತೆ ಮುಸ್ಲಿಂ ಸಮಾಜದ ಬಾಂಧವರು ಪಾಲ್ಗೊಂಡಿದ್ದರು.

---



**ಗದಗ: ಗದಗ-ಬೆಟಗೇರಿ ಗ್ರಾಮ ದೇವತೆಗಳ ಹರಿಜಾತ್ರಾ ಮಹೋತ್ಸವದ ಮೆರವಣಿಗೆಯಲ್ಲಿ ಪಾಲ್ಗೊಂಡ ಭಕ್ತರಿಗೆ ಲಯನ್ಸ್ ಕ್ಲಬ್ ಪದಾಧಿಕಾರಿಗಳು ಕುಡಿಯುವ ನೀರಿನ ಬಾಟಲಿಗಳನ್ನು ವಿತರಿಸಿದರು.**

---

### ಶಾರೀರಿಕ-ಮಾನಸಿಕ ಆರೋಗ್ಯ ದೃಢತೆಗೆ ಸಹಕಾರಿ: ಪ್ರಜ್ವಲ್ ಜೋಶಿ

## ಯಜ್ಞೋಪವೀತ ಧಾರಣ ಸಂಸ್ಕಾರಕ್ಕೆ ವೈಜ್ಞಾನಿಕ ಹಿನ್ನೆಲೆ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಯಜ್ಞೋಪವೀತ ಧಾರಣ ಸಂಸ್ಕಾರವು ಪರಮ ಪವಿತ್ರವಾಗಿದ್ದು, ಧಾರ್ಮಿಕ ಮಹತ್ವದ ಜತೆಗೆ ವೈಜ್ಞಾನಿಕ ಹಿನ್ನೆಲೆಯನ್ನೂ ಹೊಂದಿದೆ. ಇದು ವ್ಯಕ್ತಿಯ ಶಾರೀರಿಕ ಹಾಗೂ ಮಾನಸಿಕ ಆರೋಗ್ಯ ದೃಢವಾಗಲು ಸಹಕಾರಿಯಾಗಿದೆ ಎಂದು ಯುವ ಧಾರ್ಮಿಕ ಚಿಂತಕ ಪ್ರಜ್ವಲ್ ಜೋಶಿ ಹೇಳಿದರು.

> **ಯಜ್ಞೋಪವೀತ ಧಾರಣೆಯು ಕೇವಲ ಧಾರ್ಮಿಕ ಆಚರಣೆಯಲ್ಲ. ಜ್ಞಾನ, ಶಿಸ್ತು ಮತ್ತು ಆಧ್ಯಾತ್ಮಿಕ ಸಾಧನೆಯತ್ತ ವ್ಯಕ್ತಿಯನ್ನು ಮುನ್ನಡೆಸುವ ಮಹತ್ವದ ಸಂಸ್ಕಾರವಾಗಿದೆ.**
>
> – **ಪ್ರಜ್ವಲ್ ಜೋಶಿ,** ಯುವ ಧಾರ್ಮಿಕ ಚಿಂತಕ

ಪಟ್ಟಣದ ಶಂಕರಭಾರತಿಮಠದಲ್ಲಿ ಮಂಗಳವಾರ ಹಸ್ತಾಯುಕ್ತ ಷಷ್ಠಿ ತಿಥಿಯಂದು ಬ್ರಾಹ್ಮಣ ಸಮಾಜದ ವತಿಯಿಂದ ಆಯೋಜಿಸಿದ್ದ ಯಜ್ಞೋಪವೀತ ಧಾರಣಾ ಕಾರ್ಯಕ್ರಮದ ನೇತೃತ್ವ ವಹಿಸಿ ಅವರು ಮಾತನಾಡಿದರು. ಹಿಂದೂ ಧರ್ಮದ 16 ಪ್ರಮುಖ ಸಂಸ್ಕಾರಗಳಲ್ಲಿ ಉಪನಯನ ಅಥವಾ ಯಜ್ಞೋಪವೀತ ಧಾರಣೆಯೂ ಒಂದಾಗಿದೆ. ವೇದಾಧ್ಯಯನ, ಗಾಯತ್ರಿ ಮಂತ್ರ ಜಪ ಹಾಗೂ ಧಾರ್ಮಿಕ ಅನುಷ್ಠಾನಗಳಿಗೆ ದೀಕ್ಷೆ ನೀಡುವ ಸಂಕೇತವಾಗಿ ಯಜ್ಞೋಪವೀತವನ್ನು ಪರಿಗಣಿಸಲಾಗುತ್ತದೆ ಎಂದು ತಿಳಿಸಿದರು.

ಬ್ರಹ್ಮವೃಂದದ ಅಧ್ಯಕ್ಷ ಗೋಪಾಲ ಪಡ್ನಿಸ್ ಮಾತನಾಡಿ, ವೇದ, ಪುರಾಣ ಹಾಗೂ ಪೂಜೆ-ಪುನಸ್ಕಾರಗಳ ಹಿಂದೆ ಧಾರ್ಮಿಕತೆಯ ಜತೆಗೆ ವೈಜ್ಞಾನಿಕ ಅಂಶಗಳೂ ಅಡಗಿವೆ. ಬ್ರಾಹ್ಮಣರು ನಿತ್ಯ ಗಾಯತ್ರಿ ಮಂತ್ರ ಜಪಿಸುವ ರೂಢಿ ಬೆಳೆಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ನೂರಾರು ವಿಪ್ರಬಾಂಧವರು ಋಷಿ ಹೋಮ ಹಾಗೂ ಉಪಾಕರ್ಮ ಹೋಮ ನೆರವೇರಿಸಿದರು. ಬಳಿಕ ಯಜ್ಞೋಪವೀತಂ ಪರಮಂ ಪವಿತ್ರಂ' ಮಂತ್ರ ಪಠಣದೊಂದಿಗೆ ಹೊಸ ಯಜ್ಞೋಪವೀತ ಧರಿಸಿ, ಹಳೆಯ ಯಜ್ಞೋಪವೀತವನ್ನು ಶಾಸ್ತ್ರೋಕ್ತವಾಗಿ ವಿಸರ್ಜಿಸಿದರು.

ಕಾರ್ಯದರ್ಶಿ ಅರವಿಂದ ದೇಶಪಾಂಡೆ, ತಾಲೂಕು ಬ್ರಾಹ್ಮಣ ಸಮಾಜದ ಅಧ್ಯಕ್ಷ ಕೃಷ್ಣ ಕುಲಕರ್ಣಿ ಸೇರಿದಂತೆ ಸಮಾಜದ ಪ್ರಮುಖರು ಹಾಗೂ ವಿಪ್ರಬಾಂಧವರು ಪಾಲ್ಗೊಂಡಿದ್ದರು.

---

### ಸಹಕಾರಿ ಸಂಘದ ಪ್ರಥಮ ವಾರ್ಷಿಕೋತ್ಸವದಲ್ಲಿ ಹೈಮಾಸ್ಟ್ ಉದ್ಘಾಟನೆ, ವನಮಹೋತ್ಸವ

## ಮಾದರಿ ಉದ್ಯಾನವನ ನಿರ್ಮಾಣ ಹೆಮ್ಮೆಯ ಸಂಗತಿ



> **ನಂದೀಶ್ವರ ನಗರದಲ್ಲಿ ನಿರ್ಮಾಣವಾಗುತ್ತಿರುವ ಮಾದರಿ ಉದ್ಯಾನವನ ಬಡಾವಣೆಯ ಅಭಿವೃದ್ಧಿಗೆ ಹೊಸ ಮೆರುಗು ನೀಡಲಿದೆ. ಸಾರ್ವಜನಿಕರ ಸಹಭಾಗಿತ್ವದಿಂದ ಅಭಿವೃದ್ಧಿ ಕಾರ್ಯಗಳಿಗೆ ಮತ್ತಷ್ಟು ವೇಗ ಸಿಗಲಿದೆ.**
>
> – **ಕೆ.ಎಚ್. ಪಾಟೀಲ,** ಯುವ ಮುಖಂಡ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದ ನಂದೀಶ್ವರ ನಗರದಲ್ಲಿ ಸುಮಾರು ಒಂದು ಎಕರೆ ಪ್ರದೇಶದಲ್ಲಿ ಮಾದರಿ ಉದ್ಯಾನವನ ನಿರ್ಮಾಣವಾಗುತ್ತಿರುವುದು ಹೆಮ್ಮೆಯ ಸಂಗತಿಯಾಗಿದ್ದು, ನಗರದ ಶೋಭೆ ಹೆಚ್ಚಿಸುವ ಜತೆಗೆ ಬಡಾವಣೆಯ ನಾಗರಿಕರಿಗೆ ಉತ್ತಮ ವಾತಾವರಣ ಕಲ್ಪಿಸಲಿದೆ ಎಂದು ಯುವ ಮುಖಂಡ ಕೆ.ಎಚ್. ಪಾಟೀಲ ಹೇಳಿದರು.

ಕಳಸಾಪೂರ ರಸ್ತೆಯ ನಂದೀಶ್ವರ ನಗರದ ಇಂಡೋರ್ ಸ್ಟೇಡಿಯಂ ಬಡಾವಣೆ ನಾಗರಿಕರ ವಿವಿಧೋದ್ದೇಶಗಳ ಸಹಕಾರಿ ಸಂಘದ ಪ್ರಥಮ ವಾರ್ಷಿಕೋತ್ಸವದ ಅಂಗವಾಗಿ ಆಯೋಜಿಸಿದ್ದ ಪಂಚವಟಿ ನಾಗದೇವತಾ ರುದ್ರಾಭಿಷೇಕ, ಪಂಚವಟಿ ನಾಗರಕಟ್ಟೆ, ಉದ್ಯಾನವನದ ಕಾಂಪೌಂಡ್ ಹಾಗೂ ಹೈಮಾಸ್ಟ್ ಉದ್ಘಾಟನೆ, ವನಮಹೋತ್ಸವ ಮತ್ತು ಅನ್ನಸಂತರ್ಪಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಡಾವಣೆಯ ಸರ್ವತೋಮುಖ ಅಭಿವೃದ್ಧಿಗೆ ಅಗತ್ಯವಿರುವ ಕಾಮಗಾರಿಗಳನ್ನು ಜನಪ್ರತಿನಿಧಿಗಳ ಗಮನಕ್ಕೆ ತಂದು ಪೂರ್ಣಗೊಳಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ನಗರಸಭೆ ಸದಸ್ಯೆ ವಿದ್ಯಾವತಿ ಗಡಗಿ, ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಮಾಜಿ ನಗರಸಭೆ ಸದಸ್ಯ ಅನಿಲ ಗರಗ ಸೇರಿದಂತೆ ಪ್ರಮುಖರು ಭಾಗವಹಿಸಿದ್ದರು.


ಸಂಘದ ಅಧ್ಯಕ್ಷ ವಿಶ್ವನಾಥರೆಡ್ಡಿ ಗದ್ದಿಕೇರಿ ಅಧ್ಯಕ್ಷತೆ ವಹಿಸಿದ್ದರು. ಗೌರವಾಧ್ಯಕ್ಷ ಜಿ.ಎಸ್. ಹಿರೇಮಠ ಉಪಸ್ಥಿತರಿದ್ದರು.

ಈ ವೇಳೆ ಪಂಚವಟಿ ನಾಗದೇವತಾ ರುದ್ರಾಭಿಷೇಕ ನೆರವೇರಿಸಿ, ಉದ್ಯಾನವನದ ಕಾಂಪೌಂಡ್ ಹಾಗೂ ಹೈಮಾಸ್ಟ್ ಉದ್ಘಾಟಿಸಲಾಯಿತು. ವನಮಹೋತ್ಸವದ ಅಂಗವಾಗಿ ಸಸಿ ನೆಡುವ ಮೂಲಕ ಪರಿಸರ ಸಂರಕ್ಷಣೆಯ ಸಂದೇಶ ಸಾರಲಾಯಿತು. ಬಳಿಕ ಅನ್ನಸಂತರ್ಪಣೆ ನಡೆಯಿತು.

---

### ಶ್ರದ್ಧೆ-ಭಕ್ತಿಯಿಂದ ಧರಿಸಿ ನಿಯಮ ಪಾಲಿಸಬೇಕು: ಶ್ರೀವಲ್ಲಭಶಾಸ್ತ್ರಿ ಸದರಜೋಶಿ

## ಯಜ್ಞೋಪವೀತ ಪರಮ ಪವಿತ್ರವಾದದ್ದು



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಯಜ್ಞೋಪವೀತವು ಪರಮ ಪವಿತ್ರವಾದದ್ದಾಗಿದ್ದು, ಮನುಷ್ಯನ ಶುಭ್ರತೆ, ಆಯುಷ್ಯ, ಬಲ ಹಾಗೂ ತೇಜಸ್ಸನ್ನು ಹೆಚ್ಚಿಸುವ ಮಹತ್ವ ಹೊಂದಿದೆ ಎಂದು ದತ್ತಾತ್ರೇಯ ದೇವಸ್ಥಾನದ ಅರ್ಚಕ ಶ್ರೀವಲ್ಲಭಶಾಸ್ತ್ರಿ ಸದರಜೋಶಿ ಹೇಳಿದರು. ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಬುಧವಾರ ನಡೆದ ಶ್ರಾವಣಿ ಯಜ್ಞೋಪವೀತ ಧಾರಣೆ ಹಾಗೂ ಹೋಮದ ನೇತೃತ್ವ ವಹಿಸಿ ಅವರು ಮಾತನಾಡಿದರು.

ಯಜ್ಞೋಪವೀತ ಧಾರಣೆಗೆ ಭಾರತೀಯ ಸಂಸ್ಕೃತಿಯಲ್ಲಿ ವಿಶೇಷ ಮಹತ್ವವಿದೆ. ಯಜ್ಞೋಪವೀತಕ್ಕೆ ವಿಧಿವತ್ತಾಗಿ ಸಂಸ್ಕಾರ ನೆರವೇರಿಸಿ, ದೇವತೆಗಳ ಪೂಜೆ ಹಾಗೂ ವೇದವ್ಯಾಸರಿಗೆ ಸಮರ್ಪಣೆ ಮಾಡಿದ ಬಳಿಕ ಶ್ರದ್ಧಾ-ಭಕ್ತಿಯಿಂದ ಧರಿಸಬೇಕು ಎಂದರು.

ಯಜ್ಞೋಪವೀತ ಧರಿಸಿದವರು ಧಾರ್ಮಿಕ ನಿಯಮಗಳನ್ನು ಪಾಲಿಸಬೇಕು. ಇದು ವ್ಯಕ್ತಿಯ ತಪೋಶಕ್ತಿಯನ್ನು ವೃದ್ಧಿಸುವ ಮಹತ್ವದ ಸಂಸ್ಕಾರವಾಗಿದೆ ಎಂದು ತಿಳಿಸಿದರು.

ಆರ್.ಡಿ. ಕುಲಕರ್ಣಿ ಮಾತನಾಡಿ, ಯಜ್ಞೋಪವೀತ ಧರಿಸಿದವರು ನಿತ್ಯ ತ್ರಿಕಾಲ ಸಂಧ್ಯಾವಂದನೆ ಮಾಡುವುದು ಹಾಗೂ ಗಾಯತ್ರಿ ಮಂತ್ರ ಜಪಿಸುವುದು ಅಗತ್ಯ ಎಂದರು.

ಕಾರ್ಯಕ್ರಮದಲ್ಲಿ ಅರುಣ ಗ್ರಾಮಪುರೋಹಿತ, ನಾಗೇಶಭಟ್ಟ ಗ್ರಾಮಪುರೋಹಿತ, ಮಂಜುನಾಥ ಗ್ರಾಮಪುರೋಹಿತ, ಅಜಿತ ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ, ಕೃಷ್ಣಾ ಗ್ರಾಮಪುರೋಹಿತ, ಸುಮಂತ ಗ್ರಾಮಪುರೋಹಿತ, ರಾಮಕೃಷ್ಣ ಸದರಜೋಶಿ ಸೇರಿದಂತೆ ಬ್ರಾಹ್ಮಣ ಸಮಾಜದವರು ಪಾಲ್ಗೊಂಡಿದ್ದರು.

> **ಯಜ್ಞೋಪವೀತವು ಕೇವಲ ಧಾರ್ಮಿಕ ಸಂಕೇತವಲ್ಲ; ಶ್ರದ್ಧೆ, ಶಿಸ್ತು ಮತ್ತು ಧಾರ್ಮಿಕ ಆಚರಣೆಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮಹತ್ವದ ಸಂಸ್ಕಾರವಾಗಿದೆ.**
>
> – **ಶ್ರೀವಲ್ಲಭಶಾಸ್ತ್ರಿ ಸದರಜೋಶಿ,** ಅರ್ಚಕರು

# ಬಂದ್ ಆತಂಕಕ್ಕೆ ತೆರೆ; ಕೆಂಚಲಾಪೂರ ಶಾಲೆ ಪುನರಾರಂಭ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕಳೆದ ಒಂದು ವಾರದಿಂದ ತೀವ್ರ ಚರ್ಚೆಗೆ ಕಾರಣವಾಗಿದ್ದ ಪಟ್ಟಣದ ಕೆಂಚಲಾಪೂರ ಬಡಾವಣೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಪುನರಾರಂಭಗೊಂಡಿದ್ದು, ಗುರುವಾರ ಕ್ಷೇತ್ರ ಶಿಕ್ಷಣಾಧಿಕಾರಿ ಶಿವರಾಜ ಸೀಮಿಕೇರಿ ಶಾಲೆಗೆ ಭೇಟಿ ನೀಡಿ ಪಾಲಕರು, ಸಾರ್ವಜನಿಕರು ಹಾಗೂ ಶಿಕ್ಷಣ ಪ್ರೇಮಿಗಳ ಸಭೆ ನಡೆಸುವ ಮೂಲಕ ಉಂಟಾಗಿದ್ದ ಗೊಂದಲವನ್ನು ನಿವಾರಿಸುವ ಪ್ರಯತ್ನ ನಡೆಸಿದರು. ಸುಮಾರು 30 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಈ ಶಾಲೆಯಲ್ಲಿ ಕಳೆದ ಎರಡು-ಮೂರು ವರ್ಷಗಳಿಂದ ಉಂಟಾದ ನಿರ್ಲಕ್ಷ್ಯದಿಂದ ಮಕ್ಕಳು ವರ್ಗಾವಣೆ ಪ್ರಮಾಣಪತ್ರ ಪಡೆದು ಬೇರೆ ಶಾಲೆಗಳಿಗೆ ದಾಖಲಾದ ಕಾರಣ, ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಶೂನ್ಯ ದಾಖಲಾತಿ ಉಂಟಾಗಿತ್ತು. ಇದರಿಂದ ಶಾಲೆಯನ್ನು ಮುಚ್ಚಲಾಗುತ್ತಿದೆ ಎಂಬ ಆತಂಕ ಸಾರ್ವಜನಿಕ ವಲಯದಲ್ಲಿ ಮೂಡಿತ್ತು.

ಸಾರ್ವಜನಿಕರ ಆಕ್ರೋಶ ಮತ್ತು ಶಾಲೆ ಉಳಿಸಬೇಕೆಂಬ ಒತ್ತಾಯದ ಹಿನ್ನೆಲೆಯಲ್ಲಿ ಕಾರ್ಯಪ್ರವೃತ್ತರಾದ ಶಿಕ್ಷಣ ಇಲಾಖೆ ಅಧಿಕಾರಿಗಳು ಪಾಲಕರ ಮನವೊಲಿಸಿ ಮಕ್ಕಳನ್ನು ಮತ್ತೆ ಶಾಲೆಗೆ ಕಳುಹಿಸುವಂತೆ ಮನವಿ ಮಾಡಿದ್ದರು. ಅದರಂತೆ ಮಂಗಳವಾರ ಶಾಲೆ ಪುನರಾರಂಭಗೊಂಡಿತ್ತು. ಈ ಹಿನ್ನೆಲೆಯಲ್ಲಿ ಗುರುವಾರ ನಡೆದ ಪಾಲಕರು, ಸಾರ್ವಜನಿಕರು ಹಾಗೂ ಶಿಕ್ಷಣ ಪ್ರೇಮಿಗಳ ಸಭೆಗೆ ವಿಶೇಷ ಮಹತ್ವ ದೊರೆಯಿತು. ಸಭೆಯಲ್ಲಿ ಮಾತನಾಡಿದ ಯುವ ಮುಖಂಡ ಮಂಜುನಾಥ ಮಾಗಡಿ, ಕೆಂಚಲಾಪೂರ ಶಾಲೆಯಲ್ಲಿ ಶಿಕ್ಷಣದ ಗುಣಮಟ್ಟದ ಬಗ್ಗೆ ಅಧಿಕಾರಿಗಳು ಹೆಚ್ಚಿನ ಗಮನ ಹರಿಸಬೇಕು. ಶಿಕ್ಷಕರು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕು. ಕನ್ನಡ ಶಾಲೆಗಳನ್ನು ಉಳಿಸಿ ಬೆಳೆಸುವುದು ಎಲ್ಲರ ಜವಾಬ್ದಾರಿಯಾಗಿದ್ದು, ಈ ಶಾಲೆಯಲ್ಲಿ ಎಲ್‌ಕೆಜಿ ಹಾಗೂ ಯುಕೆಜಿ ತರಗತಿಗಳನ್ನು ಆರಂಭಿಸಬೇಕು. ಈ ಭಾಗದ ಜನರು ಶಾಲೆಯ ಅಭಿವೃದ್ಧಿಗೆ ಸಂಪೂರ್ಣ ಸಹಕಾರ ನೀಡಲಿದ್ದಾರೆ ಎಂದು ಹೇಳಿದರು.

ಬಳಿಕ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಶಿವರಾಜ ಸೀಮಿಕೇರಿ, ಶಿಕ್ಷಕರು ನಿರೀಕ್ಷಿತ ರೀತಿಯಲ್ಲಿ ಕಾರ್ಯನಿರ್ವಹಿಸದಿರುವುದರಿಂದ ಶಾಲೆ ಈ ಸ್ಥಿತಿಗೆ ತಲುಪಿದೆ ಎಂಬ ಪಾಲಕರು ಹಾಗೂ ಸಾರ್ವಜನಿಕರ ಆರೋಪವನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಇಂತಹ ಪರಿಸ್ಥಿತಿಯು ಇಡೀ ಶಿಕ್ಷಣ ಇಲಾಖೆಗೆ ಕೆಟ್ಟ ಹೆಸರು ತರುವಂತಾಗಿದೆ ಎಂದು ಹೇಳಿದರು.

ಶಾಲೆಯನ್ನು ಯಾವುದೇ ಕಾರಣಕ್ಕೂ ಬಂದ್ ಮಾಡುವುದಿಲ್ಲ ಎಂದು ಸ್ಪಷ್ಟಪಡಿಸಿದ ಅವರು, ಶಿಕ್ಷಕರು ಪ್ರಾಮಾಣಿಕತೆ ಹಾಗೂ ದಕ್ಷತೆಯಿಂದ ಕಾರ್ಯನಿರ್ವಹಿಸಿ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕು. ಶಿಕ್ಷಕ ವೃತ್ತಿಯ ಗೌರವವನ್ನು ಕಾಪಾಡಿಕೊಂಡು ವೃತ್ತಿ ಬದುಕನ್ನು ಸಾರ್ಥಕಗೊಳಿಸಬೇಕು ಎಂದು ಪರೋಕ್ಷ ಎಚ್ಚರಿಕೆ ನೀಡಿದರು. ಇದೇ ವೇಳೆ ಶಾಲೆಗೆ ಒಬ್ಬ ಶಿಕ್ಷಕರನ್ನು ಸ್ಥಳದಲ್ಲಿಯೇ ನಿಯೋಜಿಸುವ ಭರವಸೆ ನೀಡಿ, ಸಂಬಂಧಿತ ಶಿಕ್ಷಕರ ಹೆಸರನ್ನು ಘೋಷಿಸಿದರು. ಅವರು ತಕ್ಷಣದಿಂದಲೇ ಕರ್ತವ್ಯಕ್ಕೆ ಹಾಜರಾಗಿ ಕಾರ್ಯನಿರ್ವಹಿಸುವಂತೆ ಸೂಚಿಸಲಾಯಿತು. ಮುಂದಿನ ದಿನಗಳಲ್ಲಿ ಇಂತಹ ಪರಿಸ್ಥಿತಿ ಮರುಕಳಿಸದಂತೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಶಿವರಾಜ ಸೀಮಿಕೇರಿ ಭರವಸೆ ನೀಡಿದರು.

ಸಭೆಯಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಸುಲೇಮಾನ ಮುಜಾವರ, ಶಿಕ್ಷಣ ಸಂಯೋಜಕ ಆರ್.ಬಿ. ಜೋಶಿ, ಕ್ಷೇತ್ರ ಸಮನ್ವಯಾಧಿಕಾರಿ ಎಸ್.ಕೆ. ಹವಾಲ್ದಾರ, ಸಿಆರ್‌ಪಿಗಳಾದ ಉಮೇಶ ನೇಕಾರ, ಶ್ರೀನಿವಾಸ ಮತ್ತೂರ, ಎನ್.ಎ. ಮುಲ್ಲಾ, ಶಿಕ್ಷಕರಾದ ಚಂದ್ರಕಾಂತ ನೇಕಾರ, ಬಿ.ಎಂ. ಕುಂಬಾರ, ಡಿ.ಬಿ. ದೊಡ್ಡಮನಿ, ಶಾಲೆಯ ಮುಖ್ಯಶಿಕ್ಷಕಿ ಎಲ್.ಕೆ. ಹೆಬ್ಬಳ್ಳಿ ಸೇರಿದಂತೆ ಓಣಿಯ ಹಿರಿಯರು, ಪಾಲಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

> **ಕೆಂಚಲಾಪೂರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯನ್ನು ಯಾವುದೇ ಕಾರಣಕ್ಕೂ ಮುಚ್ಚುವುದಿಲ್ಲ. ಶಾಲೆಯನ್ನು ಉಳಿಸಿ ಬೆಳೆಸಲು ಶಿಕ್ಷಣ ಇಲಾಖೆ, ಶಿಕ್ಷಕರು, ಪಾಲಕರು ಹಾಗೂ ಸಾರ್ವಜನಿಕರೆಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಶಾಲೆಯ ಹಿಂದಿನ ವೈಭವವನ್ನು ಮರಳಿ ತರಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.**
> **– ಶಿವರಾಜ ಸೀಮಿಕೇರಿ,** ಕ್ಷೇತ್ರ ಶಿಕ್ಷಣಾಧಿಕಾರಿ

## ಸಂಕ್ಷಿಪ್ತ ಸುದ್ದಿಗಳು

### ರಾಷ್ಟ್ರ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ದೊಡ್ಡದು: ಕೆ.ಟಿ. ಪಾಟೀಲ



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ರಾಷ್ಟ್ರ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಉತ್ತಮ ಪ್ರಜೆಗಳ ನಿರ್ಮಾಣದ ಹೊಣೆಗಾರಿಕೆ ಶಿಕ್ಷಕರ ಮೇಲಿದೆ ಎಂದು ನಿವೃತ್ತ ಶಿಕ್ಷಕ ಕೆ.ಟಿ. ಪಾಟೀಲ ಹೇಳಿದರು. ಸಮೀಪದ ಮಾಡಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 2026-27ನೇ ಸಾಲಿನಲ್ಲಿ ವರ್ಗಾವಣೆಗೊಂಡ ಶಿಕ್ಷಕರಾದ ಜಿ.ಎಫ್. ಡೊಂಬರ ಹಾಗೂ ಎಸ್.ಎ. ಶಿರಕೋಳ ಅವರ ಬೀಳ್ಕೊಡುಗೆ ಸಮಾರಂಭದಲ್ಲಿ ಸನ್ಮಾನಿಸಿ ಅವರು ಮಾತನಾಡಿದರು. ಶಿಕ್ಷಕರು ಅಜ್ಞಾನದ ಕತ್ತಲನ್ನು ಓಡಿಸಿ ಸುಜ್ಞಾನದ ಬೆಳಕನ್ನು ನೀಡುವ ಮಹತ್ತರ ಕಾರ್ಯ ಮಾಡುತ್ತಿದ್ದಾರೆ. ಕಾರ್ಯಾಂಗ, ಶಾಸಕಾಂಗ, ನ್ಯಾಯಾಂಗ ಹಾಗೂ ಪತ್ರಿಕಾರಂಗ ಸೇರಿದಂತೆ ವಿವಿಧ ಕ್ಷೇತ್ರಗಳಿಗೆ ಉತ್ತಮ ವ್ಯಕ್ತಿಗಳನ್ನು ರೂಪಿಸುವಲ್ಲಿ ಶಿಕ್ಷಕರ ಕೊಡುಗೆ ಅಪಾರವಾಗಿದೆ ಎಂದರು. ಶಿಕ್ಷಕ ಎಸ್.ಎ. ಶಿರಕೋಳ ಮಾತನಾಡಿ, ಮಾಡಳ್ಳಿ ಗ್ರಾಮದ ಹಿರಿಯರು, ಶಾಲೆಯ ಶಿಕ್ಷಕ ವೃಂದ, ಎಸ್‌ಡಿಎಂಸಿ ಹಾಗೂ ಪಾಲಕರ ಸಹಕಾರದಿಂದ ಉತ್ತಮ ಸೇವೆ ಸಲ್ಲಿಸಲು ಸಾಧ್ಯವಾಯಿತು. ತಮ್ಮ ವೃತ್ತಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸಿದ ತೃಪ್ತಿ ಇದೆ ಎಂದು ತಿಳಿಸಿದರು. ಪ್ರಧಾನ ಗುರುಮಾತೆ ಬಾಳಿಕಾಯಿ, ಎಸ್‌ಡಿಎಂಸಿ ಅಧ್ಯಕ್ಷ ಮಲ್ಲಪ್ಪ ಚಿಂಚಲಿ, ಶಿಕ್ಷಕರಾದ ಡಿ.ಎಂ. ಶಿರಂಜಿ, ಎಂ.ಎಚ್. ದೊಡ್ಡಮನಿ, ಜಿ.ಆರ್. ಪಾಟೀಲ, ಪ್ರಶಾಂತ ಮೊಹರೇಕರ, ತೋಟಪ್ಪ ಹುಗಾರ, ಸರೋಜಾ ಕಳಸಾಪೂರ ಸೇರಿದಂತೆ ಇತರರು ಉಪಸ್ಥಿತರಿದ್ದರು.

> **ಶಿಕ್ಷಕರು ತಮ್ಮ ವೃತ್ತಿಯನ್ನು ಅತ್ಯಂತ ಪ್ರಾಮಾಣಿಕತೆಯಿಂದ ನಿರ್ವಹಿಸಿದಾಗ ಮಾತ್ರ ಉತ್ತಮ ಪ್ರಜೆಗಳನ್ನು ಹಾಗೂ ಸದೃಢ ರಾಷ್ಟ್ರವನ್ನು ನಿರ್ಮಿಸಲು ಸಾಧ್ಯವಾಗುತ್ತದೆ.**
> **– ಕೆ.ಟಿ. ಪಾಟೀಲ,** ನಿವೃತ್ತ ಶಿಕ್ಷಕ

### ಮಾನವೀಯ ಮೌಲ್ಯ, ಸೇವಾ ಮನೋಭಾವ ಅಳವಡಿಸಿಕೊಳ್ಳಲು ಡಾ. ಗಿರಿಜಾ ಹಸಬಿ ಕರೆ

### ಭಕ್ತರು ಸದ್ಭಕ್ತರಾದರೆ ಉತ್ಕೃಷ್ಟ ಸಮಾಜ ನಿರ್ಮಾಣ



**ವಿಜಯಸಾಕ್ಷಿ ಸುದ್ದಿ, ಗದಗ**

ಭಕ್ತರು ಕೇವಲ ದೇವರ ದರ್ಶನ ಮತ್ತು ಧಾರ್ಮಿಕ ಕಾರ್ಯಕ್ರಮಗಳಿಗೆ ಸೀಮಿತವಾಗದೆ ಮಾನವೀಯ ಮೌಲ್ಯ, ಸೇವಾ ಮನೋಭಾವ ಹಾಗೂ ಸಮಾಜೋನ್ನತಿಯ ಚಿಂತನೆಯನ್ನು ಅಳವಡಿಸಿಕೊಂಡು ಸದ್ಭಕ್ತರಾದರೆ ಉತ್ಕೃಷ್ಟ ಸಮಾಜ ನಿರ್ಮಾಣ ಸಾಧ್ಯ ಎಂದು ಡಿ.ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯದ ಉಪನ್ಯಾಸಕಿ ಡಾ. ಗಿರಿಜಾ ಹಸಬಿ ಹೇಳಿದರು. ಎಸ್‌ವೈಬಿಎಂಎಸ್ ಯೋಗಪಾಠಶಾಲೆ, ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ವಚನಪಾಠಶಾಲೆ ಹಾಗೂ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಸಹಯೋಗದಲ್ಲಿ ಶ್ರಾವಣ ಮಾಸದ ಅಂಗವಾಗಿ ಆಯೋಜಿಸಿದ್ದ ಸಾಪ್ತಾಹಿಕ ವಚನ ಶ್ರಾವಣ-2026 ಕಾರ್ಯಕ್ರಮದಲ್ಲಿ ಶರಣ ಕಾಡಸಿದ್ಧೇಶ್ವರರ ವಚನಾರ್ಥ ಕುರಿತು ಅವರು ಮಾತನಾಡಿದರು. ಬಾಳೆಹಣ್ಣಿನಂತೆ ಮೃದು ಮತ್ತು ಮಧುರವಾಗಿ, ಬೆಲ್ಲದಂತೆ ಸಿಹಿಯಾದ ನಡೆ-ನುಡಿಯೊಂದಿಗೆ, ಮಾವಿನ ಹಣ್ಣಿನಂತೆ ಸಮಾಜಕ್ಕೆ ಮಾದರಿಯಾಗುವ ಗುಣಗಳನ್ನು ಭಕ್ತರು ಅಳವಡಿಸಿಕೊಳ್ಳಬೇಕು. ನಿಸ್ವಾರ್ಥ ಸೇವೆ ಹಾಗೂ ಪರೋಪಕಾರದ ಮೂಲಕ ಸಮಾಜದ ಏಳಿಗೆಗೆ ಶ್ರಮಿಸುವವರೇ ನಿಜವಾದ ಸದ್ಭಕ್ತರು ಎಂದರು. ನಿವೃತ್ತ ಶಿಕ್ಷಕಿ ಮಂಜುಳಾ ಹಾಸಿಲಕರ ಮಾತನಾಡಿ, ವ್ಯಕ್ತಿಯೊಬ್ಬ ಕೇವಲ ವ್ಯಕ್ತಿಯಾಗಿ ಬೆಳೆಯದೆ ಸಮಾಜದ ಶಕ್ತಿಯಾಗಿ ಹಾಗೂ ಮಾದರಿ ವ್ಯಕ್ತಿಯಾಗಿ ರೂಪುಗೊಳ್ಳಬೇಕು. ಈ ನಿಟ್ಟಿನಲ್ಲಿ ಶರಣರ ವಚನಗಳು ಪ್ರೇರಣೆಯಾಗಿವೆ ಎಂದರು. ಅಧ್ಯಕ್ಷತೆ ವಹಿಸಿದ್ದ ಡಿ.ಜಿ.ಎಂ. ಆಯುರ್ವೇದ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಡಾ. ಎಂ.ವಿ. ಐಹೊಳೆ ಮಾತನಾಡಿದರು. ಡಾ. ಎಸ್.ಕೆ. ನಾಲ್ವತವಾಡಮಠ, ಬಸವರಾಜ ತೋಟಗೇರ, ವಿಜಯಲಕ್ಷ್ಮೀ ಆನೆಹೊಸೂರ, ಕೆ.ಎಸ್. ಪಲ್ಲೇದ ಸೇರಿದಂತೆ ಇತರರು ಉಪಸ್ಥಿತರಿದ್ದರು.

> **ದೇವರ ದರ್ಶನ ಮತ್ತು ಧಾರ್ಮಿಕ ಆಚರಣೆ ಮಾತ್ರ ಭಕ್ತಿಯಲ್ಲ. ಮಾನವೀಯ ಮೌಲ್ಯ, ಸೇವಾ ಮನೋಭಾವ ಹಾಗೂ ಸಮಾಜದ ಏಳಿಗೆಗಾಗಿ ನಿಸ್ವಾರ್ಥವಾಗಿ ಶ್ರಮಿಸುವ ಗುಣಗಳನ್ನು ಅಳವಡಿಸಿಕೊಂಡಾಗ ಭಕ್ತರು ಸದ್ಭಕ್ತರಾಗುತ್ತಾರೆ. ಇಂತಹ ಸದ್ಭಕ್ತರಿಂದಲೇ ಉತ್ತಮ ಸಮಾಜ ನಿರ್ಮಾಣ ಸಾಧ್ಯ.**
> **– ಡಾ. ಗಿರಿಜಾ ಹಸಬಿ,** ಉಪನ್ಯಾಸಕಿ

### ಬನ್ನಿಕೊಪ್ಪದಲ್ಲಿ ಸಂಭ್ರಮದ ಈದ್ ಆಚರಣೆ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಿನ ಬನ್ನಿಕೊಪ್ಪ ಗ್ರಾಮದಲ್ಲಿ ಮುಸ್ಲಿಂ ಬಾಂಧವರು ಈದ್ ಹಬ್ಬವನ್ನು ಅತ್ಯಂತ ಸಡಗರ, ಸಂಭ್ರಮ ಹಾಗೂ ಶ್ರದ್ಧಾಭಕ್ತಿಯಿಂದ ಆಚರಿಸಿದರು. ಈದ್ ಹಬ್ಬದ ಅಂಗವಾಗಿ ಗ್ರಾಮದ ಮುಸ್ಲಿಂ ಬಾಂಧವರು ಹೊಸ ಬಟ್ಟೆಗಳನ್ನು ಧರಿಸಿ ಬೆಳಗ್ಗೆಯೇ ಮಸೀದಿಗೆ ತೆರಳಿ ವಿಶೇಷ ನಮಾಜ್ ಹಾಗೂ ಪ್ರಾರ್ಥನೆ ಸಲ್ಲಿಸಿದರು. ನಮಾಜ್ ಬಳಿಕ ಪರಸ್ಪರ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು. ಹಿರಿಯರು, ಯುವಕರು ಹಾಗೂ ಮಕ್ಕಳು ಸೇರಿದಂತೆ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಹಬ್ಬದ ಸಂಭ್ರಮವನ್ನು ಹೆಚ್ಚಿಸಿದರು.

ಈದ್ ಹಬ್ಬವು ತ್ಯಾಗ, ಸಹನೆ, ಪ್ರೀತಿ, ದಾನ, ಮಾನವೀಯತೆ ಮತ್ತು ಸಹೋದರತ್ವದ ಮಹತ್ವವನ್ನು ಸಾರುತ್ತದೆ. ಸಮಾಜದಲ್ಲಿ ಎಲ್ಲರೂ ಪರಸ್ಪರ ಪ್ರೀತಿ, ಗೌರವ ಹಾಗೂ ಸೌಹಾರ್ದತೆಯಿಂದ ಬದುಕಬೇಕು ಎಂಬ ಸಂದೇಶವನ್ನು ಈ ಹಬ್ಬ ನೀಡುತ್ತದೆ.

ಬನ್ನಿಕೊಪ್ಪ ಗ್ರಾಮದಲ್ಲಿಯೂ ಈದ್ ಆಚರಣೆಯ ಸಂದರ್ಭದಲ್ಲಿ ಒಗ್ಗಟ್ಟು ಹಾಗೂ ಸೌಹಾರ್ದತೆಯ ಸಂದೇಶ ಸಾರಲಾಯಿತು. ಈ ಸಂದರ್ಭದಲ್ಲಿ ಊರಿನ ಹಿರಿಯರಾದ ಡಿ.ಕೆ. ಅತ್ತಾರ, ಮಾಬುಸಾಬ್ ನದಾಫ್, ಶಿರಾಜ್ ಚಂಗಾಪುರಿ, ಮಾಬುಸಾಬ್ ಹಾರೋಗೇರಿ, ದಾವಲಸಾಬ್ ಬೆನಕಲ್, ಮಕ್ಬೂಲ್‌ಸಾಬ್ ಬೆನಕಲ್, ರಾಜಸಾಬ್ ಲಕ್ಷ್ಮೇಶ್ವರ, ಫಕ್ರುಸಾಬ್ ಪಿಂಜಾರ್, ಚಾಂದಸಾಬ್ ಮುಂದಿನಮನಿ, ರಜಾಕ್‌ಸಾಬ್ ದೊಡ್ಡಮನಿ, ಮೌಲಾಸಾಬ್ ನದಾಫ್, ಮಮ್ಮುಸಾಬ್ ನದಾಫ್, ಅಬ್ದುಲ್‌ಗಫಾರಸಾಬ್ ಡಂಬಳ, ಮಾಬುಸಾಬ್ ಕಲಿಕೇರಿ, ಫಕ್ರುಸಾಬ್ ನದಾಫ್ ಸೇರಿದಂತೆ ಗ್ರಾಮದ ಅನೇಕ ಮುಸ್ಲಿಂ ಬಾಂಧವರು ಉಪಸ್ಥಿತರಿದ್ದರು.

## ಅಂಗನವಾಡಿ ಶಿಕ್ಷಕಿಯರ ಮೇಲೆ ಹೆಚ್ಚುವರಿ ಕೆಲಸದ ಹೊರೆ ಬೇಡ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಅಂಗನವಾಡಿ ಶಿಕ್ಷಕಿಯರನ್ನು ಪೂರ್ವ ಪ್ರಾಥಮಿಕ ಶಿಕ್ಷಣ ಬೋಧನೆಗೆ ಮಾತ್ರ ಸೀಮಿತಗೊಳಿಸಬೇಕು ಎಂದು ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಚ್.ಎಸ್. ಸುನಂದಾ ಆಗ್ರಹಿಸಿದರು.

ತಾಲೂಕು ಅಂಗನವಾಡಿ ನೌಕರರ ಸಂಘದ ಆರನೇ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಕಿಯರನ್ನು ಬಿಎಲ್‌ಒ, ಎಸ್‌ಐಆರ್, ಎಫ್‌ಆರ್‌ಎಸ್, ಜಾತಿ ಪ್ರಮಾಣ ಪತ್ರ ವಿತರಣೆ, ಗೃಹಲಕ್ಷ್ಮಿ ಸೇರಿದಂತೆ ವಿವಿಧ ಕೆಲಸಗಳಿಗೆ ಬಳಸುತ್ತಿರುವುದರಿಂದ ಮಾನಸಿಕ ಒತ್ತಡ ಹೆಚ್ಚುತ್ತಿದೆ ಎಂದು ಆರೋಪಿಸಿದರು.

ಕೆಪಿಎಸ್ ಶಾಲೆಗಳು ಹಾಗೂ ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ-ಯುಕೆಜಿ ಆರಂಭಿಸುವುದರಿಂದ ಅಂಗನವಾಡಿ ಕೇಂದ್ರಗಳ ಅಸ್ತಿತ್ವಕ್ಕೆ ಧಕ್ಕೆ ಉಂಟಾಗುವ ಆತಂಕವಿದೆ ಎಂದರು. ಸಮ್ಮೇಳನದ ಅಂಗವಾಗಿ 350ಕ್ಕೂ ಹೆಚ್ಚು ಸದಸ್ಯರು ಸುರಿಯುವ ಮಳೆಯಲ್ಲೂ ನಗರದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ ಸರ್ಕಾರದ ನೀತಿಗಳ ವಿರುದ್ಧ ಘೋಷಣೆ ಕೂಗಿದರು. ಸಮ್ಮೇಳನದಲ್ಲಿ 30 ಸದಸ್ಯರ ತಾಲೂಕು ಸಮಿತಿ ಆಯ್ಕೆಯಾಗಿದ್ದು, ಜೆ.ಎಂ. ಜ್ಯೋತೇಶ್ವರಿ ಅಧ್ಯಕ್ಷೆ, ಟಿ. ಮಾರೆಕ್ಕ ಪ್ರಧಾನ ಕಾರ್ಯದರ್ಶಿ ಹಾಗೂ ಡಿ. ಸೌಭಾಗ್ಯ ಖಜಾಂಚಿಯಾಗಿ ಆಯ್ಕೆಯಾದರು. ಇದೇ ವೇಳೆ ಎಸ್‌ಎಸ್‌ಎಲ್‌ಸಿಯಲ್ಲಿ ಶೇ.98 ಅಂಕ ಗಳಿಸಿದ ಸಹನಾ ಅವರನ್ನು ತಾಯಿ ಗೀತಾ ಅವರೊಂದಿಗೆ ಸನ್ಮಾನಿಸಲಾಯಿತು.

## ಸಂಸ್ಕೃತ ಕಲಿತು ಬೆಳೆಸೋಣ: ಪ್ರಶಾಂತ ಪಾಟೀಲ



**ವಿಜಯಸಾಕ್ಷಿ ಸುದ್ದಿ, ಗದಗ**

ಸಂಸ್ಕೃತ ಭಾಷೆ ನಮ್ಮ ದೇಶದ ಅಮೂಲ್ಯ ಸಂಪತ್ತಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಜನರು ಸಂಸ್ಕೃತ ಕಲಿಯುವ ಮೂಲಕ ಅದರ ಸಂರಕ್ಷಣೆ ಹಾಗೂ ಬೆಳವಣಿಗೆಗೆ ಮುಂದಾಗಬೇಕು ಎಂದು ವಿದ್ಯಾದಾನ ಸಮಿತಿ ಪದವಿಪೂರ್ವ ಕಾಲೇಜಿನ ಸಂಸ್ಕೃತ ಉಪನ್ಯಾಸಕ ಪ್ರಶಾಂತ ಪಾಟೀಲ ಹೇಳಿದರು. ಗದಗ ಜಿಲ್ಲಾ ಸಂಸ್ಕೃತ ಭಾರತೀ ವತಿಯಿಂದ ನಗರದ ಹಳೆ ಸರಾಫ ಬಜಾರದ ಜಗದಂಬಾ ಮಂದಿರದಲ್ಲಿ ಆಯೋಜಿಸಿದ್ದ ಸಂಸ್ಕೃತ ಸುಭಾಷಿತ ಪಾಠನ ವರ್ಗದ ಮುಕ್ತಾಯ ಸಮಾರಂಭದಲ್ಲಿ ಅವರು ಮಾತನಾಡಿದರು. ಎಸ್‌ಎಸ್‌ಕೆ ಮಹಿಳಾ ಮಂಡಳಿ ಅಧ್ಯಕ್ಷೆ ಸ್ನೇಹಲತಾ ಪಾ. ಕಬಾಡಿ ಮಾತನಾಡಿ, ನಾವು ನಿತ್ಯ ಜೀವನದಲ್ಲಿ ಅನೇಕ ಸಂಸ್ಕೃತ ಪದಗಳನ್ನು ಬಳಸುತ್ತಿದ್ದರೂ ಅವು ಸಂಸ್ಕೃತ ಪದಗಳೆಂಬ ಅರಿವು ಹಲವರಿಗೆ ಇಲ್ಲ. ಆದ್ದರಿಂದ ಸಂಸ್ಕೃತವನ್ನು ಉಳಿಸಿ, ಬೆಳೆಸಿ, ಹೆಚ್ಚು ಹೆಚ್ಚು ಕಲಿಯಬೇಕು ಎಂದರು.

ಗದಗ ಜಿಲ್ಲಾ ಸಂಸ್ಕೃತ ಭಾರತೀ ಸಂಯೋಜಕ ಹಾಗೂ ಜಗದ್ಗುರು ತೋಂಟದಾರ್ಯ ಸಂಸ್ಕೃತ ಪಾಠಶಾಲೆಯ ಮುಖ್ಯಾಧ್ಯಾಪಕ ಎಸ್.ಎನ್. ಶಿಂಪಿಗೇರ ಮಾತನಾಡಿ, ಪ್ರಾಚೀನ ಮತ್ತು ಸಮೃದ್ಧ ಭಾಷೆಯಾಗಿರುವ ಸಂಸ್ಕೃತವನ್ನು ಎಲ್ಲರೂ ಕಲಿತು ಇತರರಿಗೂ ಕಲಿಸುವ ಮೂಲಕ ಗ್ರಾಮಮಟ್ಟದಿಂದಲೇ ಅದರ ಬೆಳವಣಿಗೆಗೆ ಶ್ರಮಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪರಶುರಾಮಸಾ ಬದಿಯವರು ವಹಿಸಿದ್ದರು. ಜಗದ್ಗುರು ತೋಂಟದಾರ್ಯ ಸಂಸ್ಕೃತ ಪಾಠಶಾಲೆಯ ವಿದ್ಯಾರ್ಥಿನಿಯರಿಂದ ಸಮೂಹ ನೃತ್ಯ ನಡೆಯಿತು. ಸಂಸ್ಕೃತ ಭಾರತೀ ಬಾಲಕೇಂದ್ರ ಪ್ರಮುಖ ಶೈಲಜಾ ಕುಲಕರ್ಣಿ, ನಗರ ಸಂಯೋಜಕ ಮೌನೇಶ ಭಜಂತ್ರಿ, ಸಂಸ್ಕೃತ ಶಿಕ್ಷಕಿ ವಿಜಯಲಕ್ಷ್ಮೀ ಪಟ್ಟಣಶೆಟ್ಟಿ, ಸುಮನ್ ಖಟವಟೆ ಉಪಸ್ಥಿತರಿದ್ದರು. ರೇಖಾ ಮಡಿವಾಳರ ಕಾರ್ಯಕ್ರಮ ನಿರೂಪಿಸಿದರು. ಸುಮನಾ ಭಗಿನಿ ವಂದಿಸಿದರು. ಶಾಂತಿಮಂತ್ರದೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡಿತು.

> **ಸಂಸ್ಕೃತ ಭಾಷೆ ನಮ್ಮ ದೇಶದ ಅಮೂಲ್ಯ ಸಂಪತ್ತಾಗಿದೆ. ಸಂಸ್ಕೃತ ಸಂಭಾಷಣೆಯ ಮೂಲಕ ಅದರ ಪ್ರಚಾರವನ್ನು ಹೆಚ್ಚಿಸಿ, ಹೆಚ್ಚಿನ ಜನರು ಈ ಭಾಷೆಯನ್ನು ಕಲಿಯುವಂತೆ ಮಾಡಬೇಕು.**
> **– ಪ್ರಶಾಂತ ಪಾಟೀಲ, ಸಂಸ್ಕೃತ ಉಪನ್ಯಾಸಕ**

### ರೋಣ-ಗಜೇಂದ್ರಗಡ ಹಾಲು ಉತ್ಪಾದಕರ ಸಂಘಗಳ ಪದಾಧಿಕಾರಿಗಳಿಗೆ ವಿಶೇಷ ತರಬೇತಿ

## ರೈತರ ಆರ್ಥಿಕ ಪ್ರಗತಿಗೆ ಧಾರವಾಡ ಹಾಲು ಒಕ್ಕೂಟದ ಶ್ರಮ



**ವಿಜಯಸಾಕ್ಷಿ ಸುದ್ದಿ, ರೋಣ**

ರೈತರ ಆರ್ಥಿಕ ಪ್ರಗತಿ ಹಾಗೂ ಹೈನುಗಾರಿಕೆ ಕ್ಷೇತ್ರದ ಅಭಿವೃದ್ಧಿಗೆ ಧಾರವಾಡ ಹಾಲು ಒಕ್ಕೂಟ ನಿರಂತರವಾಗಿ ಶ್ರಮಿಸುತ್ತಿದ್ದು, ರೈತರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸುತ್ತಿದೆ ಎಂದು ಒಕ್ಕೂಟದ ಮಾಜಿ ಅಧ್ಯಕ್ಷ ಹಾಗೂ ಹಾಲಿ ನಿರ್ದೇಶಕ ನೀಲಕಂಠ ಅಸೂಟಿ ಹೇಳಿದರು. ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಗದಗ ಜಿಲ್ಲಾ ಸಹಕಾರ ಯೂನಿಯನ್ ಹಾಗೂ ಧಾರವಾಡ ಹಾಲು ಒಕ್ಕೂಟದ ಸಂಯುಕ್ತ ಆಶ್ರಯದಲ್ಲಿ ರೋಣ ಹಾಗೂ ಗಜೇಂದ್ರಗಡ ತಾಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ಮುಖ್ಯ ಕಾರ್ಯನಿರ್ವಾಹಕರಿಗೆ ಗುರುವಾರ ರೋಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ವಿಶೇಷ ತರಬೇತಿ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರೈತರಿಗೆ ಪಶು ಆಹಾರ, ಮೇವಿನ ಬಿತ್ತನೆ ಬೀಜ, ತುರ್ತು ಪಶುವೈದ್ಯಕೀಯ ಸೇವೆ ಹಾಗೂ ಜಾನುವಾರು ವಿಮೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ. ಹಾಲು ಉತ್ಪಾದನೆ ಹೆಚ್ಚಿಸಿ ರೈತರ ಆದಾಯ ವೃದ್ಧಿಸುವ ನಿಟ್ಟಿನಲ್ಲಿ ಒಕ್ಕೂಟ ಹಲವು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ ಎಂದರು.

ಧಾರವಾಡ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಡಿ.ಟಿ. ಕಳಸದ, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕಿ ಅನಿತಾ ಕಲ್ಲಣ್ಣವರ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

ತರಬೇತಿ ಶಿಬಿರದಲ್ಲಿ ಹೈನು ರಾಸುಗಳ ಪಾಲನೆ-ಪೋಷಣೆ, ಸಹಕಾರ ಸಂಘಗಳ ಲೆಕ್ಕಪತ್ರ ನಿರ್ವಹಣೆ ಹಾಗೂ ಶುದ್ಧ ಹಾಲು ಉತ್ಪಾದನೆ ಕುರಿತು ತಜ್ಞರು ಮಾಹಿತಿ ನೀಡಿದರು.

> **ಹೈನುಗಾರಿಕೆ ರೈತರ ಆರ್ಥಿಕ ಬಲವರ್ಧನೆಗೆ ಪ್ರಮುಖ ಕ್ಷೇತ್ರವಾಗಿದೆ. ವೈಜ್ಞಾನಿಕ ಪದ್ಧತಿ ಅಳವಡಿಸಿಕೊಂಡು ಗುಣಮಟ್ಟದ ಹಾಲು ಉತ್ಪಾದನೆಗೆ ರೈತರು ಮುಂದಾಗಬೇಕು.**
> **– ನೀಲಕಂಠ ಅಸೂಟಿ,** ಮಾಜಿ ಅಧ್ಯಕ್ಷ

## ಜಾನುವಾರುಗಳ ಸರಣಿ ಸಾವು; ಸಾಮೂಹಿಕ ಅಂತ್ಯಕ್ರಿಯೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ದೊಡ್ಡೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮುನಿಯನ ತಾಂಡಾದಲ್ಲಿ ಜಾನುವಾರುಗಳ ಸರಣಿ ಸಾವು ಸಂಭವಿಸಿದ್ದು, ಮಂಗಳವಾರದಿಂದ ಬುಧವಾರದವರೆಗೆ ಐದು ಜಾನುವಾರುಗಳು ಮೃತಪಟ್ಟಿವೆ. ಸಾವನ್ನಪ್ಪಿದ ಜಾನುವಾರುಗಳನ್ನು ಜೆಸಿಬಿ ಸಹಾಯದಿಂದ ಸಾಮೂಹಿಕವಾಗಿ ಅಂತ್ಯಕ್ರಿಯೆ ನಡೆಸಲಾಯಿತು.

ಘಟನೆ ನಡೆದ ತಾಂಡಾಕ್ಕೆ ಪಶು ವೈದ್ಯಕೀಯ ಸೇವಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ನಿಂಗಪ್ಪ ಓಲೇಕಾರ ಅವರು ಸಿಬ್ಬಂದಿ ಗಿರೀಶ ಅವರೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಕುರಿತು ಮಾಹಿತಿ ನೀಡಿದ ಡಾ. ನಿಂಗಪ್ಪ ಓಲೇಕಾರ, ಇನ್ನೂ ಒಂದೆರಡು ಜಾನುವಾರುಗಳಿಗೆ ಚಿಕಿತ್ಸೆ ನೀಡಲಾಗುತ್ತಿದ್ದು, ತೀವ್ರ ಅಸ್ವಸ್ಥಗೊಂಡಿದ್ದ ಜಾನುವಾರುಗಳ ಆರೋಗ್ಯದಲ್ಲಿ ಸುಧಾರಣೆ ಕಂಡುಬರುತ್ತಿದೆ. ಜಾನುವಾರು ಮಾಲೀಕರಿಗೆ ಸೂಕ್ತ ಮಾರ್ಗದರ್ಶನ ನೀಡಲಾಗಿದ್ದು, ಇಲಾಖೆಯ ಸಿಬ್ಬಂದಿಯೊಬ್ಬರು ಸ್ಥಳದಲ್ಲೇ ಇದ್ದು ಚಿಕಿತ್ಸೆ ಮುಂದುವರಿಸಿದ್ದಾರೆ ಎಂದು ತಿಳಿಸಿದರು.



**ಲಕ್ಷ್ಮೇಶ್ವರ ತಾಲೂಕಿನ ಮುನಿಯನ ತಾಂಡಾದಲ್ಲಿ ಜಾನುವಾರುಗಳ ಸರಣಿ ಸಾವಿನ ಹಿನ್ನೆಲೆಯಲ್ಲಿ ಪಶು ವೈದ್ಯಕೀಯ ಸೇವಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ನಿಂಗಪ್ಪ ಓಲೇಕಾರ ಭೇಟಿ ನೀಡಿ ಪರಿಶೀಲಿಸಿದರು.**

ಸಾವನ್ನಪ್ಪಿದ ಜಾನುವಾರುಗಳ ಮಾಲೀಕರಿಗೆ ಪ್ರತಿ ಜಾನುವಾರಿಗೆ ₹15 ಸಾವಿರ ಪರಿಹಾರ ನೀಡಲಾಗುವುದು. ಸೋಮವಾರ ಶಾಸಕ ಡಾ. ಚಂದ್ರು ಲಮಾಣಿ ಅವರಿಂದ ಪರಿಹಾರದ ಚೆಕ್ ವಿತರಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಲಕ್ಷ್ಮಣ ಲಮಾಣಿ, ಶಿವಪ್ಪ ಲಮಾಣಿ, ಲೋಕೇಶ ಲಮಾಣಿ, ಸೋಮಣ್ಣ ಲಮಾಣಿ, ಮಂಗಳೆಪ್ಪ ಲಮಾಣಿ, ರಮೇಶ ಲಮಾಣಿ, ರಾಮಪ್ಪ ಲಮಾಣಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ದಸರಾ ಉತ್ಸವ ಸಮಿತಿಗೆ ನೂತನ ಪದಾಧಿಕಾರಿಗಳ ಆಯ್ಕೆ



**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಎಸ್.ಎಸ್.ಕೆ. ತರುಣ ಸಂಘ ಹಾಗೂ ಶ್ರೀ ಅಂಬಾಭವಾನಿ ದೇವಸ್ಥಾನ, ಬೆಟಗೇರಿ ಇವರ ಆಶ್ರಯದಲ್ಲಿ ನಡೆದ ಸಭೆಯಲ್ಲಿ 2026ನೇ ಸಾಲಿನ ಎಸ್.ಎಸ್.ಕೆ. ದಸರಾ ಉತ್ಸವ ಸಮಿತಿಯ ನೂತನ ಪದಾಧಿಕಾರಿಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಸಮಿತಿಯ ಚೇರಮನ್ನರಾಗಿ ಸುರೇಶ ಎಸ್. ಮೇರವಾಡೆ, ವೈಸ್ ಚೇರಮನ್ನರಾಗಿ ಶ್ರೀರಾಮ ಎಸ್. ಹಬೀಬ, ಗೌರವ ಕಾರ್ಯದರ್ಶಿಯಾಗಿ ಹನುಮಂತಸಾ ಎಂ. ರಾಯಬಾಗಿ, ಸಹಕಾರ್ಯದರ್ಶಿಯಾಗಿ ಪ್ರಶಾಂತ ಟಿ. ಸೋಳಂಕಿ, ಖಜಾಂಚಿಯಾಗಿ ಸೋಮಶೇಖರ ಆರ್. ಮೇರವಾಡೆ ಹಾಗೂ ಲೆಕ್ಕ ತಪಾಸಿಗರಾಗಿ ನರಸಿಂಗಸಾ ವೈ. ಮೇರವಾಡೆ ಅವರನ್ನು ಆಯ್ಕೆ ಮಾಡಲಾಯಿತು. ಆಯ್ಕೆಯಾದ ನೂತನ ಪದಾಧಿಕಾರಿಗಳಿಗೆ ಪಂಚ ಟ್ರಸ್ಟ್ ಕಮಿಟಿ, ತರುಣ ಸಂಘ, ಮಹಿಳಾ ಮಂಡಳದ ಸದಸ್ಯರು, ಪದಾಧಿಕಾರಿಗಳು ಹಾಗೂ ಸಮಾಜದ ಎಲ್ಲ ಬಾಂಧವರು ಅಭಿನಂದನೆ ಸಲ್ಲಿಸಿದ್ದಾರೆ.

## ಜಾನುವಾರುಗಳ ಸರಣಿ ಸಾವು; ರೈತ ಕುಟುಂಬಗಳಿಗೆ ಮುತ್ತು ರಾಠೋಡ ಸಾಂತ್ವನ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಮುನಿಯನ ತಾಂಡಾದಲ್ಲಿ ಏಕಾಏಕಿ ಆಕಳು-ಎಮ್ಮೆಗಳು ಸಾವನ್ನಪ್ಪಿದ ಹಿನ್ನೆಲೆಯಲ್ಲಿ ಬಿಜೆಪಿ ಯುವ ಮುಖಂಡ ಹಾಗೂ ಜವಳಿ ನಿಗಮ ಮಂಡಳಿ ಮಾಜಿ ನಿರ್ದೇಶಕ ಮುತ್ತು ರಾಠೋಡ ಬುಧವಾರ ತಾಂಡಾಕ್ಕೆ ಭೇಟಿ ನೀಡಿ ಸಂಕಷ್ಟಕ್ಕೀಡಾದ ರೈತ ಕುಟುಂಬಗಳಿಗೆ ಸಾಂತ್ವನ ಹೇಳಿದರು. ಜಾನುವಾರುಗಳನ್ನು ಕಳೆದುಕೊಂಡ ಕುಟುಂಬಗಳ ಮನೆಗಳಿಗೆ ಭೇಟಿ ನೀಡಿದ ಅವರು, ವೈಯಕ್ತಿಕವಾಗಿ ಧನಸಹಾಯ ಮಾಡಿ ಮಾನವೀಯತೆ ಮೆರೆದರು.

ಸರ್ಕಾರದಿಂದಲೂ ಸೂಕ್ತ ಪರಿಹಾರ ದೊರಕಿಸಲು ಪ್ರಯತ್ನಿಸುವುದಾಗಿ ಭರವಸೆ ನೀಡಿ, ಘಟನೆಯಿಂದ ಯಾರೂ ಧೈರ್ಯಗುಂದಬಾರದು ಎಂದು ಮನವಿ ಮಾಡಿದರು.

ಪಶುಸಂಗೋಪನಾ ಇಲಾಖೆಯ ಅಧಿಕಾರಿಗಳು ಹಾಗೂ ಪಶುವೈದ್ಯರು ನಿರಂತರವಾಗಿ ಗ್ರಾಮಕ್ಕೆ ಭೇಟಿ ನೀಡಿ, ಜಾನುವಾರುಗಳ ಸಾವಿಗೆ ನಿಖರ ಕಾರಣ ಪತ್ತೆಹಚ್ಚಿ ಸೂಕ್ತ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಯುವ ಮುಖಂಡ ನಾಗರಾಜ ಚಿಂಚಲಿ, ಮಹಾಂತೇಶ ಕಟಗಿ, ತಾಂಡಾದ ಹಿರಿಯರು, ರೈತರು, ಗ್ರಾಮಸ್ಥರು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

## ಮುಹಮ್ಮದ್ ಪೈಗಂಬರ್ ಸಾರ್ವಕಾಲಿಕ ನಾಯಕರು: ಆಮಿರ್ ಅಶ್‌ಅರಿ ಬನ್ನೂರು



**ವಿಜಯಸಾಕ್ಷಿ ಸುದ್ದಿ, ಮುದ್ದಟ್ಟನೂರು**

ಪೈಗಂಬರ್ ಮುಹಮ್ಮದ್ ಅವರು ಎಲ್ಲ ಸಮುದಾಯದವರ ಒಳಿತನ್ನು ಬಯಸಿದ ಸಾರ್ವಕಾಲಿಕ ನಾಯಕರಾಗಿದ್ದು, ಮಾನವ ಸಮಾಜಕ್ಕೆ ಶಾಂತಿ, ಸೌಹಾರ್ದತೆ ಮತ್ತು ಒಳಿತಿನ ಮಾರ್ಗವನ್ನು ತೋರಿಸಿಕೊಟ್ಟಿದ್ದಾರೆ ಎಂದು ಖತೀಬ್ ಆಮಿರ್ ಅಶ್‌ಅರಿ ಬನ್ನೂರು ಹೇಳಿದರು.

ಪೈಗಂಬರ್ ಮುಹಮ್ಮದ್ ಅವರ ಜನ್ಮದಿನಾಚರಣೆಯ ಅಂಗವಾಗಿ ಜಾಮಿಯಾ ಸುನ್ನಿ ಮಸೀದಿ ಹಾಗೂ ಖುರ್ರತುಸ್ಸಾದಾತ್ ಸುನ್ನಿ ಮದರಸ ವತಿಯಿಂದ ಆಯೋಜಿಸಿದ್ದ ಮಿಲಾದ್ ಸಂದೇಶ ಜಾಥಾವನ್ನುದ್ದೇಶಿಸಿ ಅವರು ಮಾತನಾಡಿದರು. ತಮ್ಮ ಅನುಯಾಯಿಗಳಿಗೆ ಕೆಡುಕಿನ ಬಗ್ಗೆ ಮುನ್ನೆಚ್ಚರಿಕೆ ನೀಡಿ, ಒಳಿತಿನ ದಾರಿಯನ್ನು ಪರಿಚಯಿಸಿದ ಪೈಗಂಬರ್ ಮುಹಮ್ಮದ್ ತನ್ನ ನಾಲಿಗೆ ಮತ್ತು ಕೈಯಿಂದ ಇತರರಿಗೆ ತೊಂದರೆ ಉಂಟುಮಾಡುವವನು ನಿಜವಾದ ಮುಸ್ಲಿಂ ಆಗಲು ಸಾಧ್ಯವಿಲ್ಲ ಎಂಬ ಸಂದೇಶ ನೀಡಿದ್ದಾರೆ ಎಂದು ತಿಳಿಸಿದರು. ಗ್ರಾಮ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಎಲ್ಲ ಧರ್ಮದ ಜನರು ಪರಸ್ಪರ ಶಾಂತಿ, ಪ್ರೀತಿ ಮತ್ತು ಸೌಹಾರ್ದತೆಯಿಂದ ಜೀವನ ನಡೆಸಬೇಕು ಎಂದು ಅವರು ಕರೆ ನೀಡಿದರು.

ಈ ಸಂದರ್ಭದಲ್ಲಿ ಹುಸೇನ್ ಸಾಬ್, ವಲೀ ಸಾಬ್, ಖಲೀಲ್ ಸಾಬ್, ಹೊನ್ನೂರು ಸಾಬ್, ರಂಜಾನ್ ಸಾಬ್, ಖಾದಿರ್ ಬಾಷಾ, ರಹ್ಮತುಲ್ಲ ಸಾಬ್ ಸೇರಿದಂತೆ ಊರಿನ ಹಿರಿಯರು, ಯುವಕರು ಹಾಗೂ ಮದರಸ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ಹೆಚ್ಚುವರಿ ಪ್ರಭಾರ, ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಭ್ರಷ್ಟಾಚಾರದ ಆರೋಪ

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಕ್ರಮ ತನಿಖೆಗೆ ಆಗ್ರಹ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಹೆಚ್ಚುವರಿ ಪ್ರಭಾರ ಹಂಚಿಕೆ, ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಅಕ್ರಮ ಮತ್ತು ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿ, ಸಮಗ್ರ ತನಿಖೆ ನಡೆಸುವಂತೆ ಮುಸ್ಲಿಂ ಸಮಾಜದ ಯುವಕರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಸಾಮಾಜಿಕ ಕಾರ್ಯಕರ್ತ ಇಮಾಮಸಾಬ ಡಂಬಳ ಮಾತನಾಡಿ, ಉಚ್ಚ ನ್ಯಾಯಾಲಯ ಹಾಗೂ ಇಲಾಖೆಯ ನಿಯಮಗಳಿಗೆ ವಿರುದ್ಧವಾಗಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗೆ ಹೆಚ್ಚುವರಿ ಹುದ್ದೆಗಳ ಪ್ರಭಾರ ನೀಡಲಾಗುತ್ತಿದೆ ಎಂದು ಆರೋಪಿಸಿದರು.

ಒಬ್ಬೊಬ್ಬ ಸಿಬ್ಬಂದಿಗೆ ನಾಲ್ಕೈದು ಹುದ್ದೆಗಳ ಹೆಚ್ಚುವರಿ ಜವಾಬ್ದಾರಿ ನೀಡಿರುವುದರಿಂದ ತಾಲೂಕು ಕೇಂದ್ರಗಳಲ್ಲಿ ಅಧಿಕಾರಿಗಳು ಲಭ್ಯವಾಗುತ್ತಿಲ್ಲ. ಇದರ ಪರಿಣಾಮವಾಗಿ ಸಾರ್ವಜನಿಕರು ಹಾಗೂ ವಸತಿ ನಿಲಯಗಳ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿದ್ದಾರೆ ಎಂದು ದೂರಿದರು. ವಸತಿ ನಿಲಯಗಳಲ್ಲಿ ಮೂಲಸೌಕರ್ಯ ಮತ್ತು ಗುಣಮಟ್ಟದ ಆಹಾರದ ಕೊರತೆಯಿದ್ದು, ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿಯೂ ನಿಯಮಬಾಹಿರತೆ ನಡೆದಿದೆ ಎಂದು ಆರೋಪಿಸಿದರು.

ಇಲಾಖೆಯಲ್ಲಿನ ಎಲ್ಲ ಆರೋಪಗಳ ಕುರಿತು ಸೂಕ್ತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ರಾಜೇಸಾಬ ಶಿರಹಟ್ಟಿ, ಅಮನ್ ಬೋದ್ಲೆಖಾನ, ಆಸೀಫ್ ಯಲಿಗಾರ, ಗೌಸಮೋದಿನ್ ಸೂಡಿ, ಜೈಲಾನಿ ಶಿರಹಟ್ಟಿ, ಇರ್ಷಾದಅಹ್ಮದ ದಂಡಿನ, ಜಾಕೀರಹುಸೇನ ಮಾಲ್ದಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> **ಸಾರ್ವಜನಿಕರಿಗೆ ನ್ಯಾಯ ದೊರೆಯಬೇಕಾದರೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿನ ಅಕ್ರಮ ಹಾಗೂ ಭ್ರಷ್ಟಾಚಾರದ ಆರೋಪಗಳನ್ನು ಸಮಗ್ರ ತನಿಖೆಗೆ ಒಳಪಡಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು.**
> – **ಇಮಾಮಸಾಬ ಡಂಬಳ,** ಸಾಮಾಜಿಕ ಕಾರ್ಯಕರ್ತ

### ಒಂದೇ ಜಾತಿ, ಒಂದೇ ಧರ್ಮ, ಒಂದೇ ದೇವರು' ಸಂದೇಶ ಇಂದಿಗೂ ಸಮಾಜಕ್ಕೆ ದಾರಿದೀಪ: ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಜಾತಿಯ ಸಂಕೋಲೆ ಮುರಿದು ಸಮಾನತೆಯ ಬೆಳಕು ಚೆಲ್ಲಿದ ನಾರಾಯಣಗುರು

**ವಿಜಯಸಾಕ್ಷಿ ಸುದ್ದಿ, ಗದಗ**

ಜಾತಿ, ಧರ್ಮ, ಮೇಲು-ಕೀಳು ಎಂಬ ಭೇದಭಾವಗಳಿಂದ ಸಮಾಜವನ್ನು ಮುಕ್ತಗೊಳಿಸಿ, ಸಮಾನತೆ ಮತ್ತು ಮಾನವೀಯತೆಯ ಹಾದಿಯಲ್ಲಿ ಮುನ್ನಡೆಸಿದ ಬ್ರಹ್ಮಶ್ರೀ ನಾರಾಯಣಗುರುಗಳ ಚಿಂತನೆಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.



ಸಮಾಜದಲ್ಲಿ ಬೇರೂರಿದ್ದ ಅಸ್ಪೃಶ್ಯತೆ ಹಾಗೂ ಜಾತಿ ತಾರತಮ್ಯದ ವಿರುದ್ಧ ಹೋರಾಟ ನಡೆಸಿದ ನಾರಾಯಣಗುರುಗಳು, ಪ್ರತಿಯೊಬ್ಬ ಮನುಷ್ಯನಿಗೂ ಸಮಾನ ಹಕ್ಕು ಮತ್ತು ಗೌರವ ದೊರೆಯಬೇಕು ಎಂಬ ಸಂದೇಶವನ್ನು ತಮ್ಮ ಬದುಕಿನ ಮೂಲಕವೇ ಸಾರಿದರು ಎಂದು ಹೇಳಿದರು.

ನಗರದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಜಿಲ್ಲಾಡಳಿತ ಭವನದ ಅಡಿಟೋರಿಯಂ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಬ್ರಹ್ಮಶ್ರೀ ನಾರಾಯಣಗುರು ಜಯಂತಿ2026 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬ್ರಿಟಿಷರ ಆಡಳಿತದ ಕಾಲದಲ್ಲಿ ಕೇರಳ ಹಾಗೂ ದಕ್ಷಿಣ ಕನ್ನಡ ಭಾಗಗಳಲ್ಲಿ ಅಸ್ಪೃಶ್ಯತೆ ಮತ್ತು ಜಾತಿ ತಾರತಮ್ಯ ತೀವ್ರವಾಗಿತ್ತು. ಸಮಾಜದಲ್ಲಿ ಕೆಲ ವರ್ಗಗಳಿಗೆ ಮಾತ್ರ ಧಾರ್ಮಿಕ ಹಾಗೂ ಸಾಮಾಜಿಕ ಹಕ್ಕುಗಳು ಸೀಮಿತವಾಗಿದ್ದ ಸಂದರ್ಭದಲ್ಲಿ, ನಾರಾಯಣಗುರುಗಳು ಆ ಅನ್ಯಾಯದ ವಿರುದ್ಧ ಧ್ವನಿ ಎತ್ತಿದರು ಎಂದು ತಿಳಿಸಿದರು.

ಸಾಮಾಜಿಕ ಕಟ್ಟುಪಾಡುಗಳನ್ನು ಪ್ರಶ್ನಿಸಿದ ಅವರು, ಎಲ್ಲರೂ ಸಮಾನರು ಎಂಬ ತತ್ವವನ್ನು ಪ್ರತಿಪಾದಿಸಿದರು. ಕೆಳವರ್ಗದ ಜನರಿಗೂ ಧಾರ್ಮಿಕ ಹಕ್ಕು ದೊರೆಯಬೇಕು ಎಂಬ ಉದ್ದೇಶದಿಂದ ದೇವಾಲಯಗಳನ್ನು ನಿರ್ಮಿಸಿ, ಸಮಾಜದಲ್ಲಿ ಸಮಾನತೆಯ ಹೊಸ ಚಿಂತನೆಗೆ ನಾಂದಿ ಹಾಡಿದರು ಎಂದು ಹೇಳಿದರು.

**ಹುಟ್ಟುವಾಗ ಯಾರಿಗೂ ಜಾತಿಯಿಲ್ಲ**

ಹುಟ್ಟುವಾಗ ಯಾರಿಗೂ ಜಾತಿ ಇರುವುದಿಲ್ಲ, ಸಮಾಜವೇ ಜಾತಿಯನ್ನು ಸೃಷ್ಟಿಸುತ್ತದೆ. ಎಲ್ಲರ ರಕ್ತದ ಬಣ್ಣವೂ ಒಂದೇ' ಎಂಬ ನಾರಾಯಣಗುರುಗಳ ಚಿಂತನೆ ಇಂದಿನ ಸಮಾಜಕ್ಕೂ ಅತ್ಯಂತ ಪ್ರಸ್ತುತವಾಗಿದೆ ಎಂದು ಜಿಲ್ಲಾಧಿಕಾರಿ ಹೇಳಿದರು. ಮಗು ಹುಟ್ಟುವಾಗ ಅದರ ಮನಸ್ಸು ಶುದ್ಧವಾಗಿರುತ್ತದೆ. ಬೆಳೆಯುತ್ತಾ ಹೋದಂತೆ ಸಮಾಜದ ಕಟ್ಟುಪಾಡುಗಳು, ಜಾತಿ ಮತ್ತು ತಾರತಮ್ಯದ ಕಲ್ಪನೆಗಳು ಅದರ ಮೇಲೆ ಪರಿಣಾಮ ಬೀರುತ್ತವೆ. ಇಂತಹ ಅಸಮಾನತೆಯ ಮನೋಭಾವದಿಂದ ಹೊರಬಂದು ಮನುಷ್ಯತ್ವದಿಂದ ಬದುಕಲು ಮಹಾನ್ ದಾರ್ಶನಿಕರ ವಿಚಾರಧಾರೆಗಳು ಪ್ರೇರಣೆ ನೀಡುತ್ತವೆ ಎಂದರು.

ನಾರಾಯಣಗುರುಗಳ ಜಯಂತಿಯನ್ನು ಕೇವಲ ಆಚರಣೆಗೆ ಸೀಮಿತಗೊಳಿಸದೆ, ಅವರ ಸಮಾನತೆ, ಸಹೋದರತೆ ಹಾಗೂ ಮಾನವೀಯತೆಯ ಸಂದೇಶಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

**ಅಸಮಾನತೆಯ ವಿರುದ್ಧ ಅಹಿಂಸೆಯ ಹೋರಾಟ**

ಉಪನ್ಯಾಸಕ ಡಾ. ದತ್ತಪ್ರಸನ್ನ ಪಾಟೀಲ ಮಾತನಾಡಿ, ಅಸ್ಪೃಶ್ಯತೆ ಮತ್ತು ಸಾಮಾಜಿಕ ತಾರತಮ್ಯದ ವಿರುದ್ಧ ನಾರಾಯಣಗುರುಗಳು ಅಹಿಂಸಾತ್ಮಕ ಹೋರಾಟ ನಡೆಸುವ ಮೂಲಕ ಸಾಮಾಜಿಕ ಹಾಗೂ ಶೈಕ್ಷಣಿಕ ಕ್ರಾಂತಿಗೆ ಮುನ್ನುಡಿ ಬರೆದರು ಎಂದು ಹೇಳಿದರು.

ಒಂದೇ ಜಾತಿ, ಒಂದೇ ಧರ್ಮ, ಒಂದೇ ದೇವರು' ಎಂಬ ಅವರ ಧ್ಯೇಯವಾಕ್ಯ ಕೇವಲ ಘೋಷಣೆಯಾಗಿರದೆ, ಸಮಾನತೆಯ ಸಮಾಜ ನಿರ್ಮಾಣದ ಮಹತ್ತರ ಸಂದೇಶವಾಗಿದೆ ಎಂದರು. ಕೇರಳದ ಅರುವಿಪುರಂನಲ್ಲಿ ನೆಯ್ಯಾರ್ ನದಿಯಿಂದ ಶಿಲೆಯೊಂದನ್ನು ತಂದು ಶಿವಲಿಂಗ ಪ್ರತಿಷ್ಠಾಪಿಸುವ ಮೂಲಕ ಧಾರ್ಮಿಕ ಆಚರಣೆಗಳ ಮೇಲಿನ ಕೆಲವರ ಏಕಸ್ವಾಮ್ಯವನ್ನು ಪ್ರಶ್ನಿಸಿದರು. ಕೆಳ ಸಮುದಾಯದವರಿಗೂ ಪೂಜಾ ಹಕ್ಕು ದೊರೆಯಬೇಕು ಎಂಬ ಆಶಯದೊಂದಿಗೆ ಅವರು ಸಾಮಾಜಿಕ ಬದಲಾವಣೆಗೆ ನಾಂದಿ ಹಾಡಿದರು ಎಂದು ವಿವರಿಸಿದರು. ದೇವಸ್ಥಾನಗಳಲ್ಲಿ ಕನ್ನಡಿಗಳನ್ನು ಪ್ರತಿಷ್ಠಾಪಿಸುವ ಮೂಲಕ ದೇವರು ಪ್ರತಿಯೊಬ್ಬರಲ್ಲಿಯೂ ಇದ್ದಾನೆ ಎಂಬ ಅದ್ವೈತ ತತ್ವವನ್ನು ಜನಸಾಮಾನ್ಯರಿಗೆ ಸರಳವಾಗಿ ತಿಳಿಸಿಕೊಟ್ಟರು ಎಂದರು.

ತಳ ಸಮುದಾಯದವರು ಶೈಕ್ಷಣಿಕವಾಗಿ ಮುಂದೆ ಬರಬೇಕು ಎಂಬ ಉದ್ದೇಶದಿಂದ ಶ್ರೀ ನಾರಾಯಣ ಗುರು ಧರ್ಮ ಪರಿಪಾಲನಾ ಯೋಗಂ ಸಂಸ್ಥೆಯನ್ನು ಸ್ಥಾಪಿಸಿ ಶಿಕ್ಷಣ ಕ್ಷೇತ್ರಕ್ಕೆ ಉತ್ತೇಜನ ನೀಡಿದರು. ಬಾಲ್ಯ ವಿವಾಹ ಹಾಗೂ ಮಹಿಳೆಯರ ಮೇಲಿನ ದೌರ್ಜನ್ಯವನ್ನು ವಿರೋಧಿಸಿದ ಅವರು, ಸರಳ ವಿವಾಹ ಪದ್ಧತಿಗೆ ಒತ್ತು ನೀಡಿದರು ಎಂದು ಹೇಳಿದರು.

ಸಾರ್ವಜನಿಕ ರಸ್ತೆಗಳಲ್ಲಿ ಸಂಚರಿಸುವ ಹಾಗೂ ದೇವಸ್ಥಾನ ಪ್ರವೇಶಿಸುವ ಹಕ್ಕಿನಿಂದ ವಂಚಿತರಾಗಿದ್ದ ಅಸ್ಪೃಶ್ಯರ ಪರವಾಗಿ ನಡೆದ ವೈಕಂ ಸತ್ಯಾಗ್ರಹ ಸೇರಿದಂತೆ ಸಾಮಾಜಿಕ ಸಮಾನತೆಗಾಗಿ ನಡೆದ ಹೋರಾಟಗಳಿಗೆ ನಾರಾಯಣಗುರುಗಳು ಬೆಂಬಲ ನೀಡಿದ್ದರು. ದಲಿತರು ಹಾಗೂ ಹಿಂದುಳಿದ ವರ್ಗಗಳಿಗೆ ಸಮಾನ ಹಕ್ಕು ದೊರಕಿಸಿಕೊಡುವಲ್ಲಿ ಅವರ ಕೊಡುಗೆ ಅನನ್ಯವಾಗಿದೆ ಎಂದು ತಿಳಿಸಿದರು.

> **ಸಮಾಜದಲ್ಲಿ ಜಾತಿ, ಧರ್ಮ ಹಾಗೂ ಮೇಲು-ಕೀಳು ಎಂಬ ಭೇದಭಾವಗಳಿಗೆ ಅವಕಾಶವಿಲ್ಲ. ಪ್ರತಿಯೊಬ್ಬ ಮನುಷ್ಯನನ್ನೂ ಸಮಾನವಾಗಿ ಕಾಣುವ ಮಾನವೀಯತೆಯ ಸಂದೇಶವನ್ನು ನಾರಾಯಣಗುರುಗಳು ನೀಡಿದ್ದಾರೆ. ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ನಿಜವಾದ ಸಮಾನತೆಯ ಸಮಾಜ ನಿರ್ಮಾಣ ಸಾಧ್ಯ.**
> – **ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ**

**ವಿದ್ಯಾರ್ಥಿಗಳು, ಕ್ರೀಡಾಪಟುಗಳಿಗೆ ಸನ್ಮಾನ**

ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು ಹಾಗೂ ವಿವಿಧ ಕ್ರೀಡಾಕೂಟಗಳಲ್ಲಿ ವಿಜೇತರಾದ ಕ್ರೀಡಾಪಟುಗಳನ್ನು ಸನ್ಮಾನಿಸಲಾಯಿತು.

ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ್ ಕೆ.ಆರ್., ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ ವಿ. ಬಳ್ಳಾರಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಉಪಸ್ಥಿತರಿದ್ದರು. ಬಾಹುಬಲಿ ಜೈನ್ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

### ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗೂ ಮಹತ್ವ ನೀಡಿ: ಸಾಹಿತಿ ಐ.ಕೆ. ಕಮ್ಮಾರ

# ಪ್ರಜ್ವಲ ಭವಿಷ್ಯಕ್ಕಾಗಿ ಕಲೆಯನ್ನು ಗೌರವಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಬದುಕಿನ ನಿರ್ವಹಣೆಗಾಗಿ ಮನುಷ್ಯ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಲು ನಿರಂತರ ಪ್ರಯತ್ನ ನಡೆಸುತ್ತಾನೆ. ಉನ್ನತ ಶಿಕ್ಷಣ ಪಡೆದು ಉತ್ತಮ ಹುದ್ದೆ ಗಳಿಸುವ ಗುರಿಯೊಂದಿಗೆ ಮುನ್ನಡೆಯುತ್ತಾನೆ. ಆದರೆ, ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳಿಗೂ ಮಹತ್ವ ನೀಡಬೇಕು ಎಂದು ಹಿರಿಯ ಸಾಹಿತಿ ಐ.ಕೆ. ಕಮ್ಮಾರ ಹೇಳಿದರು.




ಕನ್ನಡ ಮತ್ತು ಕಲಾಭಿವೃದ್ಧಿ ಸೇವಾ ಸಂಸ್ಥೆ (ರಿ.), ಗದಗ ಹಾಗೂ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಬೆಂಗಳೂರು ಇವರ ಸಹಯೋಗದಲ್ಲಿ ನಗರದ ಮರಾಠ ಮಂಡಳದಲ್ಲಿರುವ ಕಲಾಕುಟೀರದಲ್ಲಿ ಏರ್ಪಡಿಸಿದ್ದ ಕರ್ನಾಟಕ ಕಲಾ ಉತ್ಸವ2026 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂಗೀತ, ಸಾಹಿತ್ಯ, ನಟನೆ, ಚಿತ್ರಕಲೆ, ನೃತ್ಯ ಸೇರಿದಂತೆ ವಿವಿಧ ಕಲೆಗಳ ಬಗ್ಗೆ ಆಸಕ್ತಿ ಬೆಳೆಸಿಕೊಳ್ಳುವುದು ಅಗತ್ಯವಾಗಿದೆ. ನಿಜವಾದ ಕಲೆಯ ಮೌಲ್ಯವನ್ನು ಅರಿತುಕೊಳ್ಳಬೇಕು. ಕಲೆಗೆ ಪ್ರಾಚೀನ ಕಾಲದಿಂದಲೂ ವಿಶೇಷ ಸ್ಥಾನಮಾನವಿದ್ದು, ಪ್ರತಿಯೊಬ್ಬರೂ ಕಲೆಯನ್ನು ಗೌರವಿಸಿ ಪ್ರೀತಿಸಬೇಕು ಎಂದು ಹೇಳಿದರು. ಎಷ್ಟೇ ಪದವಿ ಪಡೆದಿದ್ದರೂ ಸಮಾಜದಲ್ಲಿ ಕಲಾವಿದರಿಗೆ ದೊರೆಯುವ ಗುರುತಿಸುವಿಕೆ ವಿಭಿನ್ನವಾಗಿರುತ್ತದೆ. ಉತ್ತಮ ನೃತ್ಯ, ಸಂಗೀತ ಹಾಗೂ ಇತರ ಕಲಾ ಪ್ರದರ್ಶನಗಳನ್ನು ವೀಕ್ಷಿಸಲು ಜನರು ಹೆಚ್ಚಿನ ಸಂಖ್ಯೆಯಲ್ಲಿ ಸೇರುತ್ತಾರೆ. ಈ ಹಿನ್ನೆಲೆಯಲ್ಲಿ ಪಾಲಕರು ತಮ್ಮ ಮಕ್ಕಳಿಗೆ ಕಲೆಯ ಮಹತ್ವ ಮತ್ತು ಮೌಲ್ಯವನ್ನು ತಿಳಿಸಬೇಕು ಎಂದು ಸಲಹೆ ನೀಡಿದರು.

ಕಲಾಕುಟೀರ ಸಂಸ್ಥಾಪಕ ಗಜಾನನ ವೇರ್ಣೇಕರ ಅವರು ಸುಮಾರು ಇಪ್ಪತ್ತೈದು ವರ್ಷಗಳಿಂದ ಕಲೆಯ ಉಳಿವು ಹಾಗೂ ಬೆಳವಣಿಗೆಗಾಗಿ ಶ್ರಮಿಸುತ್ತಿದ್ದಾರೆ. ಯಾವುದೇ ವಿಶೇಷ ಸಹಾಯಸಹಕಾರವಿಲ್ಲದಿದ್ದರೂ ತಮ್ಮ ಕಲಾಸೇವೆಯನ್ನು ನಿರಂತರವಾಗಿ ಮುಂದುವರಿಸಿಕೊಂಡು ಬಂದಿರುವುದು ಶ್ಲಾಘನೀಯ. ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಕಲೆಯನ್ನು ಗೌರವಿಸುವ ಅವರ ಮನೋಭಾವ ನಿಜಕ್ಕೂ ಪ್ರಶಂಸನೀಯ ಎಂದು ಕಮ್ಮಾರ ಮೆಚ್ಚುಗೆ ವ್ಯಕ್ತಪಡಿಸಿದರು.

> **ಪ್ರಜ್ವಲ ಭವಿಷ್ಯ ನಿರ್ಮಾಣಕ್ಕೆ ಶಿಕ್ಷಣದಷ್ಟೇ ಕಲೆಗೂ ಮಹತ್ವವಿದೆ. ಮಕ್ಕಳು ಸಂಗೀತ, ಸಾಹಿತ್ಯ, ನೃತ್ಯ, ನಟನೆ ಸೇರಿದಂತೆ ವಿವಿಧ ಕಲೆಗಳಲ್ಲಿ ಆಸಕ್ತಿ ಬೆಳೆಸಿಕೊಳ್ಳಬೇಕು. ಪಾಲಕರು ಕೂಡ ಮಕ್ಕಳಿಗೆ ಕಲೆಯ ಮೌಲ್ಯವನ್ನು ತಿಳಿಸಿ ಪ್ರೋತ್ಸಾಹಿಸಬೇಕು.**
> – **ಐ.ಕೆ. ಕಮ್ಮಾರ,** ಹಿರಿಯ ಸಾಹಿತಿ

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೆಪಿಟಿಸಿಎಲ್‌ನ ಸಹಾಯಕ ಕಾರ್ಯನಿರ್ವಾಹಕ ಕೆ. ನಾಗರಾಜ ಮಾತನಾಡಿ, ಆರಂಭದಲ್ಲಿ ಭರತನಾಟ್ಯ ಸೇರಿದಂತೆ ನೃತ್ಯ ಕಲೆಯ ಬಗ್ಗೆ ತಮ್ಮಲ್ಲಿ ಭಿನ್ನ ಅಭಿಪ್ರಾಯವಿತ್ತು. ಈ ಕಾರಣದಿಂದ ಮಗಳನ್ನು ನೃತ್ಯ ಕಲಿಕೆಗೆ ಕಳುಹಿಸಲು ಹಿಂದೇಟು ಹಾಕಿದ್ದೆ. ಆದರೆ, ಗಜಾನನ ವೇರ್ಣೇಕರ ಅವರ ಕಲಾಕೌಶಲ್ಯವನ್ನು ಕಂಡ ಬಳಿಕ ತಮ್ಮ ಮನೋಭಾವ ಬದಲಿಸಿಕೊಂಡು ಮಗಳನ್ನು ಕಲಾಕುಟೀರಕ್ಕೆ ಸೇರಿಸಿದೆ ಎಂದು ತಿಳಿಸಿದರು.

ಸಂಗೀತ, ನೃತ್ಯ ಹಾಗೂ ಇತರ ಕಲೆಗಳ ಮೂಲಕ ದೊರೆಯುವ ಅನುಭವ ಮತ್ತು ಆನಂದ ವಿಶಿಷ್ಟವಾದುದು. ಕಲೆಯನ್ನು ಗೌರವಿಸುವುದರಿಂದ ನಮ್ಮ ವ್ಯಕ್ತಿತ್ವದ ಗೌರವವೂ ಹೆಚ್ಚುತ್ತದೆ ಎಂದು ಹೇಳಿದರು.

ಸಮ್ಮುಖ ವಹಿಸಿದ್ದ ಚಂದ್ರಶೇಖರ ಹರ್ಲಾಪುರ ದೇವರು ಮಾತನಾಡಿ, ಆರೋಗ್ಯವಂತ ಹಾಗೂ ನೆಮ್ಮದಿಯ ಜೀವನಕ್ಕೆ ಕಲೆ ಮಹತ್ವದ ಪಾತ್ರ ವಹಿಸುತ್ತದೆ. ಕಲೆಯಿಂದ ಮಾನಸಿಕ ನೆಮ್ಮದಿ ದೊರೆಯುತ್ತದೆ ಎಂದು ಅಭಿಪ್ರಾಯಪಟ್ಟರು.

ನಂತರ ವಿವಿಧೆಡೆಯಿಂದ ಆಗಮಿಸಿದ್ದ ಕಲಾವಿದರು ಹಾಗೂ ಕಲಾ ತಂಡಗಳಿಂದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಶ್ರೀಮತಿ ಪೂಜಾ ವೇರ್ಣೇಕರ ಮತ್ತು ಸಂಗಡಿಗರಿಂದ ಸುಗಮ ಸಂಗೀತ, ಲಕ್ಷ್ಮೀ ಮುಧೋಳ ಅವರ ಕಥಕ್ ನೃತ್ಯ, ಸುಕನ್ಯ ಹಿರೇಮಠ ಮತ್ತು ಸಂಗಡಿಗರಿಂದ ರಾಜಸ್ಥಾನಿ ನೃತ್ಯ ಗಮನ ಸೆಳೆಯಿತು.

ಮೇಘನಾ ವಾಲ್ಮೀಕಿ ಅವರ ಮೋಹಿನಿಯಾಟ್ಟಂ, ಶ್ರೀ ರಾಜೇಶ್ವರಿ ಕಲಾಕುಟೀರದ ಮಕ್ಕಳ ಭರತನಾಟ್ಯ, ಮಾಲಾ ತಮರಳ್ಳಿ ಅವರ ಯಕ್ಷಗಾನ ನೃತ್ಯ ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿದ್ದವು. ಬಸವೇಶ್ವರ ಗುರುಕುಲದ ಮಕ್ಕಳ ಜಾನಪದ ನೃತ್ಯ ಪ್ರೇಕ್ಷಕರನ್ನು ಮಂತ್ರಮುಗ್ಧರನ್ನಾಗಿಸಿತು. ಬಸವರಾಜ ಹಿರೇಮಠ ಅವರ ಸ್ತ್ರೀಪಾತ್ರ ಅಭಿನಯವೂ ಮೆಚ್ಚುಗೆಗೆ ಪಾತ್ರವಾಯಿತು. ಕಲಾಕುಟೀರದ ಸಂಸ್ಥಾಪಕ ಗಜಾನನ ವೇರ್ಣೇಕರ ಪ್ರಾಸ್ತಾವಿಕವಾಗಿ ಮಾತನಾಡಿದರು. ಆರಂಭದಲ್ಲಿ ಶ್ರೀ ರಾಜೇಶ್ವರಿ ಕಲಾಕುಟೀರದ ಮಕ್ಕಳಿಂದ ಪ್ರಾರ್ಥನಾ ಗೀತೆ ನಡೆಯಿತು. ಶೈಲಾ ಕಲಕೇರಿ ಕಾರ್ಯಕ್ರಮ ನಿರೂಪಿಸಿದರು. ಅಕ್ಕಮಹಾದೇವಿ ನಾಗರಾಳ ವಂದಿಸಿದರು.

### ಯುನಿಕ್ ಚಾರಿಟೇಬಲ್ ಟ್ರಸ್ಟ್‌ನಿಂದ ರೋಗಿಗಳು, ವಿದ್ಯಾರ್ಥಿಗಳಿಗೆ ಹಣ್ಣುಹಂಪಲು ವಿತರಣೆ

# ಪೈಗಂಬರ ಜಯಂತಿಗೆ ಮಾನವೀಯತೆಯ ಸ್ಪರ್ಶ

**ವಿಜಯಸಾಕ್ಷಿ ಸುದ್ದಿ, ಗದಗ**



ಪ್ರವಾದಿ ಮೊಹಮ್ಮದ್ ಪೈಗಂಬರರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಿದ ಯುನಿಕ್ ಚಾರಿಟೇಬಲ್ ಟ್ರಸ್ಟ್ (ರಿ.), ಗದಗ, ಮಾನವೀಯತೆ, ಸೇವಾ ಮನೋಭಾವ ಹಾಗೂ ಸೌಹಾರ್ದತೆಯ ಸಂದೇಶ ಸಾರಿತು.

ಜಯಂತಿಯ ಅಂಗವಾಗಿ ಟ್ರಸ್ಟ್ ವತಿಯಿಂದ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹಾಗೂ ಹೆರಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಒಳರೋಗಿಗಳಿಗೆ ಹಣ್ಣುಹಂಪಲು ವಿತರಿಸಲಾಯಿತು. ಅನಾರೋಗ್ಯದಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳ ಆರೋಗ್ಯ ವಿಚಾರಿಸಿದ ಟ್ರಸ್ಟ್ ಪದಾಧಿಕಾರಿಗಳು, ಅವರು ಶೀಘ್ರ ಗುಣಮುಖರಾಗಿ ಆರೋಗ್ಯವಂತರಾಗಲಿ ಎಂದು ಹಾರೈಸಿದರು.

ಸಂಕಷ್ಟದಲ್ಲಿರುವವರೊಂದಿಗೆ ನಿಂತು ಅವರ ನೋವಿಗೆ ಸ್ಪಂದಿಸುವುದೇ ನಿಜವಾದ ಸೇವೆ ಎಂಬ ಸಂದೇಶವನ್ನು ಈ ಸಂದರ್ಭದಲ್ಲಿ ಸಾರಲಾಯಿತು.

ಇದೇ ವೇಳೆ ಗದುಗಿನ ವೀರೇಶ್ವರ ಪುಣ್ಯಾಶ್ರಮದಲ್ಲಿ ಪೂಜ್ಯ ಕಲ್ಲಯ್ಯಜ್ಜನವರ ಸಾನಿಧ್ಯದಲ್ಲಿ ಆಶ್ರಮದ ವಿದ್ಯಾರ್ಥಿಗಳಿಗೆ ಹಣ್ಣುಹಂಪಲು ವಿತರಿಸಲಾಯಿತು. ಅಲ್ಲದೆ, ಬೆಟಗೇರಿಯ ಮಂಜು ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಶಂಕರಸಿಂಗ್ ರಜಪೂತ ಅವರ ನೇತೃತ್ವದಲ್ಲಿ ವಿದ್ಯಾರ್ಥಿಗಳಿಗೂ ಹಣ್ಣುಹಂಪಲು ವಿತರಿಸಿ, ಅವರ ಶೈಕ್ಷಣಿಕ ಪ್ರಗತಿ ಹಾಗೂ ಉಜ್ವಲ ಭವಿಷ್ಯಕ್ಕೆ ಶುಭ ಹಾರೈಸಲಾಯಿತು.

ಮಕ್ಕಳ ಮುಖದಲ್ಲಿ ಸಂತಸ ಮೂಡಿಸುವ ಮೂಲಕ ಜಯಂತಿ ಆಚರಣೆಯನ್ನು ಕೇವಲ ಸಂಭ್ರಮಕ್ಕೆ ಸೀಮಿತಗೊಳಿಸದೆ ಸಮಾಜಮುಖಿ ಸೇವಾ ಕಾರ್ಯಕ್ಕೆ ವೇದಿಕೆಯನ್ನಾಗಿ ಮಾಡಲಾಯಿತು. ಪ್ರವಾದಿ ಮೊಹಮ್ಮದ್ ಪೈಗಂಬರರ ಜಯಂತಿಯ ಅಂಗವಾಗಿ ಹಮ್ಮಿಕೊಂಡ ಈ ಸೇವಾ ಕಾರ್ಯಕ್ರಮವು ಧರ್ಮ, ಜಾತಿ ಮತ್ತು ಮತಗಳ ಎಲ್ಲೆಗಳನ್ನು ಮೀರಿ ಮಾನವೀಯತೆಯೇ ಶ್ರೇಷ್ಠ ಎಂಬ ಸಂದೇಶವನ್ನು ಬಿಂಬಿಸಿತು. ರೋಗಿಗಳ ಆರೋಗ್ಯಕ್ಕಾಗಿ ಪ್ರಾರ್ಥನೆ ಸಲ್ಲಿಸುವುದು ಹಾಗೂ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವ ಮೂಲಕ ಸಮಾಜದ ದುರ್ಬಲ ವರ್ಗಗಳ ಬಗ್ಗೆ ಕಾಳಜಿ ವಹಿಸುವ ಅಗತ್ಯವನ್ನು ಕಾರ್ಯಕ್ರಮ ಎತ್ತಿ ತೋರಿಸಿತು.

ಯುನಿಕ್ ಚಾರಿಟೇಬಲ್ ಟ್ರಸ್ಟ್ ಹಲವು ಸಮಾಜಮುಖಿ ಚಟುವಟಿಕೆಗಳ ಮೂಲಕ ಸೇವಾ ಮನೋಭಾವವನ್ನು ಬೆಳೆಸುವ ನಿಟ್ಟಿನಲ್ಲಿ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದು, ಪೈಗಂಬರ ಜಯಂತಿಯ ಅಂಗವಾಗಿ ಹಮ್ಮಿಕೊಂಡ ಈ ಕಾರ್ಯಕ್ರಮವೂ ಟ್ರಸ್ಟ್‌ನ ಮಾನವೀಯ ಕಾಳಜಿಗೆ ಸಾಕ್ಷಿಯಾಯಿತು.

ಕಾರ್ಯಕ್ರಮದಲ್ಲಿ ಟ್ರಸ್ಟ್ ಅಧ್ಯಕ್ಷ ಎಂ.ಎ. ಕಾಗದಗಾರ, ಕಾರ್ಯದರ್ಶಿ ಶ್ರೀಮತಿ ನಾಜ್ಮೀನಬಾನು ಚೋರನೂರ, ಖಜಾಂಚಿ ಶ್ರೀಮತಿ ವಾಜೀದಾ ಬಿಜಾಪೂರ, ವಿಶ್ರಾಂತ ಪ್ರಾಧ್ಯಾಪಕ ಡಾ. ಎಚ್.ಎಂ. ಅತ್ತಾರ, ಕೃಷಿ ವಿಜ್ಞಾನಿ ಡಾ. ಸಿ.ಎಂ. ರಫೀ, ಎ.ಎಂ. ಬಿಜಾಪೂರ, ಎ.ಎಂ. ಶೇಖ್, ಸುರೇಶ ಕುಂಬಾರ, ಈಶ್ವರ ಮಡಿವಾಳ ಸೇರಿದಂತೆ ಟ್ರಸ್ಟ್‌ನ ಪದಾಧಿಕಾರಿಗಳು ಹಾಗೂ ಸದಸ್ಯರು ಪಾಲ್ಗೊಂಡಿದ್ದರು.

> **ಪ್ರವಾದಿ ಮೊಹಮ್ಮದ್ ಪೈಗಂಬರರು ಮಾನವೀಯತೆ, ಕರುಣೆ ಮತ್ತು ಸೇವೆಯ ಸಂದೇಶವನ್ನು ಜಗತ್ತಿಗೆ ನೀಡಿದ್ದಾರೆ. ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಸಂಕಷ್ಟದಲ್ಲಿರುವವರ ನೆರವಿಗೆ ಧಾವಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಜಯಂತಿ ಆಚರಣೆ ಕೇವಲ ಸಂಭ್ರಮಕ್ಕೆ ಸೀಮಿತವಾಗದೆ ಸಮಾಜಮುಖಿ ಸೇವೆಗೆ ಪ್ರೇರಣೆಯಾಗಬೇಕು.**
> – **ಡಾ. ಸಿ.ಎಂ. ರಫೀ,** ಕೃಷಿ ವಿಜ್ಞಾನಿ ಹಾಗೂ ಟ್ರಸ್ಟ್ ಸದಸ್ಯರು

# ಬರ ಘೋಷಣೆಯಲ್ಲಿ ಗದಗ ಜಿಲ್ಲೆಗೆ ಅನ್ಯಾಯ

**ವಿಜಯಸಾಕ್ಷಿ ಸುದ್ದಿ, ಗದಗ**



ರಾಜ್ಯ ಸರ್ಕಾರ ಬರಪೀಡಿತ ತಾಲೂಕುಗಳ ಪಟ್ಟಿಯಲ್ಲಿ ಗದಗ ಜಿಲ್ಲೆಯ ಗಜೇಂದ್ರಗಡ ತಾಲೂಕನ್ನು ಮಾತ್ರ ಸೇರಿಸಿರುವುದು ಜಿಲ್ಲೆಯ ರೈತರಿಗೆ ಮಾಡಿದ ಅನ್ಯಾಯ ಎಂದು ಜೆಡಿಎಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಜಿಅಲಿ ಎಚ್. ಕೊಪ್ಪಳ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಜಿಲ್ಲೆಯಲ್ಲಿ ಮುಂಗಾರು ಮಳೆ ಸಮರ್ಪಕವಾಗಿ ಆಗಿಲ್ಲ. ಬಿತ್ತನೆ ಮಾಡಿದ ರೈತರು ಲಕ್ಷಾಂತರ ರೂಪಾಯಿ ನಷ್ಟ ಅನುಭವಿಸುತ್ತಿದ್ದು, ಬರ ಅಧ್ಯಯನ ಯಾವ ಆಧಾರದ ಮೇಲೆ ನಡೆಸಲಾಗಿದೆ ಎಂಬುದು ಪ್ರಶ್ನೆಯಾಗಿದೆ ಎಂದು ಅವರು ತಿಳಿಸಿದ್ದಾರೆ.

ರಾಜ್ಯ ಸರ್ಕಾರ ಗದಗ ಜಿಲ್ಲೆಯ ಎಲ್ಲ ಏಳು ತಾಲೂಕುಗಳಲ್ಲಿ ಮರು ಸಮೀಕ್ಷೆ ನಡೆಸಿ, ವಾಸ್ತವ ಪರಿಸ್ಥಿತಿಯನ್ನು ಪರಿಗಣಿಸಿ ಜಿಲ್ಲೆಯ ಎಲ್ಲ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಬೇಕು ಎಂದು ಪತ್ರಿಕಾ ಪ್ರಕಟಣೆಯಲ್ಲಿ ಒತ್ತಾಯಿಸಿದ್ದಾರೆ.

> **ಗದಗ ಜಿಲ್ಲೆಯ ರೈತರ ಸಂಕಷ್ಟವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಕೂಡಲೇ ಎಲ್ಲ ಏಳು ತಾಲೂಕುಗಳಲ್ಲಿ ಮರು ಸಮೀಕ್ಷೆ ನಡೆಸಿ ಬರಪೀಡಿತ ಪ್ರದೇಶಗಳೆಂದು ಘೋಷಿಸಬೇಕು.**
> – **ಹಾಜಿಅಲಿ ಎಚ್. ಕೊಪ್ಪಳ,** ಜೆಡಿಎಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ

# ಶ್ರೀ ಕಲ್ಮೇಶ್ವರ ವಿದ್ಯಾಲಯಕ್ಕೆ ಶೇ.100 ಫಲಿತಾಂಶ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು ವತಿಯಿಂದ 2026ರ ಆಗಸ್ಟ್ ತಿಂಗಳಲ್ಲಿ ನಡೆಸಲಾದ ಕಂಪ್ಯೂಟರ್ ವಾರ್ಷಿಕ ಪರೀಕ್ಷೆಯಲ್ಲಿ ನಗರದ ಶ್ರೀ ಕಲ್ಮೇಶ್ವರ ಬೆರಳಚ್ಚು ಮತ್ತು ಕಂಪ್ಯೂಟರ್ ವಿದ್ಯಾಲಯ ಶೇ.100 ಫಲಿತಾಂಶ ದಾಖಲಿಸಿದೆ.



ಆಫೀಸ್ ಆಟೋಮೇಷನ್ ವಿಭಾಗದಲ್ಲಿ ಶರೀಫ್‌ಸಾಬ ಹುಜರತ್ತಿ ಶೇ.80 ಅಂಕಗಳನ್ನು ಪಡೆದು ಉತ್ತಮ ಸಾಧನೆ ಮಾಡಿದ್ದಾರೆ. ಭೂಮಿಕಾ ಹಿರೇಮಠ ಹಾಗೂ ಮಂಜುಳಾ ಹಿರೇಮನಿ ತಲಾ ಶೇ.76 ಅಂಕಗಳನ್ನು ಪಡೆದಿದ್ದಾರೆ. ಶ್ರೀಧರ ಶಾಪೂರಕರ, ಅವಿತ್ರಾ ಅಂಗಡಿ ಹಾಗೂ ಅಶ್ವಿನಿ ಎಚ್. ತಲಾ ಶೇ.74 ಅಂಕಗಳನ್ನು ಪಡೆದು ಉತ್ತೀರ್ಣರಾಗಿದ್ದಾರೆ.ಪರೀಕ್ಷೆಗೆ ಹಾಜರಾದ ಎಲ್ಲ ವಿದ್ಯಾರ್ಥಿಗಳು ಉತ್ತಮ ಅಂಕಗಳೊಂದಿಗೆ ಉತ್ತೀರ್ಣರಾಗುವ ಮೂಲಕ ವಿದ್ಯಾಲಯಕ್ಕೆ ಶೇ.100 ಫಲಿತಾಂಶ ತಂದುಕೊಟ್ಟಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ವಿದ್ಯಾಲಯದ ಪ್ರಾಚಾರ್ಯ ಡಾ. ತಯಬಅಲಿ ಅ. ಹೊಂಬಳ ಹಾಗೂ ಬೋಧಕ ಮೊಹಮ್ಮದ್ ತ. ಹೊಂಬಳ ಅಭಿನಂದನೆ ಸಲ್ಲಿಸಿದ್ದಾರೆ.

### ಹಿರೇಬಣದ ಇಟಗಿ ಮನೆತನದಲ್ಲಿ ಸ್ಥಾಪನೆಯಾದ ರಾಘವೇಂದ್ರಸ್ವಾಮಿ ಮಠ

# 306 ವರ್ಷಗಳ ಇತಿಹಾಸ ಹೊತ್ತ ಲಕ್ಷ್ಮೇಶ್ವರದ ರಾಯರ ಮೃತ್ತಿಕಾ ಬೃಂದಾವನ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**


ಪಟ್ಟಣದಲ್ಲಿ ಅನೇಕ ಪ್ರಾಚೀನ ಹಾಗೂ ಐತಿಹಾಸಿಕ ಸ್ಥಳಗಳಿದ್ದು, ಹಿರೇಬಣದಲ್ಲಿರುವ ಶ್ರೀ ರಾಘವೇಂದ್ರಸ್ವಾಮಿಗಳ ಮಠವೂ ಅವುಗಳಲ್ಲಿ ಪ್ರಮುಖವಾಗಿದೆ. ಸುಮಾರು 306 ವರ್ಷಗಳ ಹಿಂದೆ ಇಟಗಿ ಮನೆತನದವರು ಲಕ್ಷ್ಮೇಶ್ವರದಲ್ಲಿ ರಾಯರ ಮೃತ್ತಿಕಾ ಬೃಂದಾವನವನ್ನು ಪ್ರತಿಷ್ಠಾಪಿಸಿದ್ದು, ಅಂದಿನಿಂದಲೂ ಈ ಮಠವು ಸಾವಿರಾರು ಭಕ್ತರ ಶ್ರದ್ಧಾ ಕೇಂದ್ರವಾಗಿ ಬೆಳೆದು ಬಂದಿದೆ.

**ಮಂತ್ರಾಲಯ ಸೇವೆಯಿಂದ ಮೃತ್ತಿಕಾ ಬೃಂದಾವನದವರೆಗೆ**

ಇಟಗಿ ಮನೆತನದವರು ಕರ್ಮಠ ಬ್ರಾಹ್ಮಣರು ಹಾಗೂ ಅಗ್ನಿಹೋತ್ರಿಗಳಾಗಿದ್ದರು. ಮನೆತನದ ಆಚಾರ್ಯರೊಬ್ಬರು ಶ್ರೀ ರಾಘವೇಂದ್ರಸ್ವಾಮಿಗಳ ಆರಾಧನೆಯ ನಿಮಿತ್ತ ಪ್ರತಿವರ್ಷ ಮಂತ್ರಾಲಯಕ್ಕೆ ತೆರಳಿ ಸೇವೆ ಸಲ್ಲಿಸುತ್ತಿದ್ದರು ಎನ್ನಲಾಗುತ್ತದೆ.

ಕಾಲಕ್ರಮೇಣ ವಯೋವೃದ್ಧರಾಗುತ್ತಿದ್ದಂತೆ ಮಂತ್ರಾಲಯಕ್ಕೆ ತೆರಳಿ ಸೇವೆ ಸಲ್ಲಿಸುವುದು ಅವರಿಗೆ ಅಸಾಧ್ಯವಾಗತೊಡಗಿತು. ಇದರಿಂದ ಮನನೊಂದ ಅವರು ಶ್ರೀ ರಾಘವೇಂದ್ರಸ್ವಾಮಿಗಳನ್ನು ಭಕ್ತಿಯಿಂದ ಸ್ಮರಿಸಿದರು.

ಜನಪ್ರತೀತಿಯ ಪ್ರಕಾರ, ರಾಯರು ವೃದ್ಧ ಬ್ರಾಹ್ಮಣನ ವೇಷದಲ್ಲಿ ಆಚಾರ್ಯರ ಮನೆಗೆ



ಅವರು ಇಲ್ಲದ ಸಂದರ್ಭದಲ್ಲಿ ಆಗಮಿಸಿ, ಅವರ ಪತ್ನಿಗೆ ಲಕ್ಷ್ಮೀ ನರಸಿಂಹ ಸಾಲಿಗ್ರಾಮ, ಮೃತ್ತಿಕೆ ಹಾಗೂ ಮಂತ್ರಾಕ್ಷತೆಗಳನ್ನು ಒಳಗೊಂಡ ದೇವರ ಪೆಟ್ಟಿಗೆಯನ್ನು ನೀಡಿ ತೆರಳಿದರು ಎನ್ನಲಾಗಿದೆ.

ಮಂತ್ರಾಲಯಕ್ಕೆ ತೆರಳಲು ಸಾಧ್ಯವಾಗುತ್ತಿಲ್ಲ ಎಂಬ ಚಿಂತೆಯಲ್ಲಿದ್ದ ಆಚಾರ್ಯರಿಗೆ ಅದೇ ರಾತ್ರಿ ಸ್ವಪ್ನದಲ್ಲಿ ಶ್ರೀ ರಾಘವೇಂದ್ರಸ್ವಾಮಿಗಳು ಕಾಣಿಸಿಕೊಂಡು, ತಾವು ನೀಡಿದ ಪೆಟ್ಟಿಗೆಯನ್ನು ಅಲ್ಲಿಯೇ ಪ್ರತಿಷ್ಠಾಪಿಸಿದರೆ ಪೂರ್ಣ ಸನ್ನಿಧಾನದಲ್ಲಿ ಇರುವುದಾಗಿ ತಿಳಿಸಿದರು ಎಂಬ ನಂಬಿಕೆ ಇದೆ.

> **ಶ್ರೀ ರಾಘವೇಂದ್ರಸ್ವಾಮಿಗಳ ಮೃತ್ತಿಕಾ ಬೃಂದಾವನ ಇರುವ ಕೆಲವೇ ಪ್ರದೇಶಗಳಲ್ಲಿ ಲಕ್ಷ್ಮೇಶ್ವರದ ರಾಯರ ಮಠವೂ ಒಂದಾಗಿದೆ. ಮಂತ್ರಾಲಯದಲ್ಲಿ ನೆಲೆಸಿರುವ ರಾಯರು ಭಕ್ತರ ಉದ್ಧಾರಕ್ಕಾಗಿ ಮೃತ್ತಿಕಾ ರೂಪದಲ್ಲಿಯೂ ಇಲ್ಲಿ ನೆಲೆನಿಂತಿದ್ದಾರೆ ಎಂಬುದು ಭಕ್ತರ ಅಚಲ ನಂಬಿಕೆ. ಇಲ್ಲಿನ ರಾಯರ ಶಕ್ತಿ ಅಪಾರವಾಗಿದ್ದು, ಈ ಮಠ ಸಾವಿರಾರು ಭಕ್ತರ ಶ್ರದ್ಧಾ ಕೇಂದ್ರವಾಗಿದೆ.**
> – **ಹನುಮಂತಾಚಾರ್ಯ ಗೋಪಾಲಾಚಾರ್ಯ ಹೊಂಬಳ,** ಶ್ರೀಮಠದ ಧರ್ಮದರ್ಶಿ

ಅದರಂತೆ ಲಕ್ಷ್ಮೇಶ್ವರದ ಇಟಗಿ ಮನೆತನದ ಮನೆಯಲ್ಲಿಯೇ ಮೃತ್ತಿಕಾ ಬೃಂದಾವನವನ್ನು ನಿರ್ಮಿಸಿ ಪೂಜಾ ಸೇವೆ ಆರಂಭಿಸಲಾಯಿತು ಎಂದು ಹೇಳಲಾಗುತ್ತದೆ.

1908ರವರೆಗೆ ಇಟಗಿ ಮನೆತನದವರಿಂದ ಸೇವೆ ನಡೆದು ಬಂದಿದ್ದು, ನಂತರ ಸುಮಾರು 1911ರಿಂದ ಇಟಗಿ ಸಂತತಿಯವರಾದ ಹನುಮಂತಾಚಾರ್ಯ ಗೋಪಾಲಾಚಾರ್ಯ ಹೊಂಬಳ ಅವರಿಂದ ಬೃಂದಾವನದ ಸೇವೆ ಮುಂದುವರಿದಿದೆ.

**ಭಕ್ತರ ಶ್ರದ್ಧಾ ಕೇಂದ್ರ**

ರಾಯರ ಪೂರ್ಣ ಸನ್ನಿಧಾನ ಇಲ್ಲಿದೆ ಎಂಬ ಭಕ್ತರ ಅಚಲ ನಂಬಿಕೆಯಿಂದಾಗಿ ಮಠದಲ್ಲಿ ಅನೇಕ ಆಶ್ಚರ್ಯಕರ ಹಾಗೂ ಪವಾಡಸದೃಶ ಘಟನೆಗಳು ನಡೆದಿವೆ ಎಂದು ಭಕ್ತರು ಹೇಳುತ್ತಾರೆ. ಭಕ್ತಿಯಿಂದ ಸೇವೆ ಸಲ್ಲಿಸಿದವರನ್ನು ರಾಯರು ಕೈಬಿಟ್ಟಿಲ್ಲ ಎಂಬ ಅನುಭವವನ್ನು ಅನೇಕ ಭಕ್ತರು ಹಂಚಿಕೊಳ್ಳುತ್ತಾರೆ.

ಮೃತ್ತಿಕಾ ಬೃಂದಾವನ ಇರುವ ಕೆಲವೇ ಪ್ರದೇಶಗಳಲ್ಲಿ ಲಕ್ಷ್ಮೇಶ್ವರ ಕೂಡ ಒಂದಾಗಿದ್ದು, ಈ ಭಾಗದ ಸಾವಿರಾರು ಭಕ್ತರ ಶ್ರದ್ಧೆ ಮತ್ತು ಭಕ್ತಿಯ ಕೇಂದ್ರವಾಗಿದೆ.

ಕಲಿಯುಗದ ಕಾಮಧೇನು ಎಂದು ಭಕ್ತರು ಆರಾಧಿಸುವ ಶ್ರೀ ರಾಘವೇಂದ್ರಸ್ವಾಮಿಗಳ ಆರಾಧನೆಯನ್ನು ಪ್ರತಿವರ್ಷ ಶ್ರಾವಣ ಮಾಸದ ಬಹುಳ ಪ್ರತಿಪದೆ, ದ್ವಿತೀಯಾ ಹಾಗೂ ತೃತೀಯಾ ತಿಥಿಗಳಂದು ಆಚರಿಸಲಾಗುತ್ತದೆ.

ಈ ಬಾರಿ 306ನೇ ವರ್ಷದ ಆರಾಧನಾ ಮಹೋತ್ಸವವು ಆ. 29, 30 ಹಾಗೂ 31ರಂದು ಸಾಂಪ್ರದಾಯಿಕ ಹಾಗೂ ಧಾರ್ಮಿಕ ವಿಧಿವಿಧಾನಗಳೊಂದಿಗೆ ನಡೆಯಲಿದೆ. ಆ.31ರಂದು ಬೆಳಿಗ್ಗೆ 10 ಗಂಟೆಗೆ ಶ್ರೀ ರಾಘವೇಂದ್ರಸ್ವಾಮಿಗಳ ರಥೋತ್ಸವ ಜರುಗಲಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka